# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 374 (283)

ಮಾನ್ಯ ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಉತ್ತರಿಸಬೇಕಾದ ದಿನಾಂಕ : 07.07.2023

<table>
<tr><th>ಕ್ರ.ಸ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿಯಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆ ಹಾಗೂ ಕಾರ್ಯಕ್ರಮಗಳ ಬಗ್ಗೆ ಸಂಕ್ಷಿಪ್ತ ಮಾಹಿತಿ ಒದಗಿಸುವುದು;</td><td>ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ.</td></tr>
<tr><td>(ಆ)</td><td>ರಾಜ್ಯದಲ್ಲಿ ಅಂಗನವಾಡಿಗಳನ್ನು ಬಾಡಿಗೆ ಕಟ್ಟಡಗಳಲ್ಲಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;</td><td>ರಾಜ್ಯದಲ್ಲಿ ಅಂಗನವಾಡಿಗಳನ್ನು ಬಾಡಿಗೆ ಕಟ್ಟಡಗಳಲ್ಲಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.</td></tr>
<tr><td>(ಇ)</td><td>ಬಂದಿದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ;</td><td>ರಾಜ್ಯದಲ್ಲಿ ಒಟ್ಟು 69,899 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಅವುಗಳಲ್ಲಿ 12,642 ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.</td></tr>
<tr><td>(ಈ)</td><td>ಈ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಿಕೊಡಲು ಸರ್ಕಾರ ಯೋಜಿಸುತ್ತಿದೆಯೆ; ಕಳೆದ ಮೂರು ವರ್ಷಗಳಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ?</td><td>ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ನಿವೇಶನ ಮತ್ತು ಅನುದಾನದ ಲಭ್ಯತೆಯ ಆಧಾರದ ಮೇಲೆ ಹಂತ-ಹಂತವಾಗಿ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಕ್ರಮ ವಹಿಸಲಾಗುತ್ತಿದೆ.<br><br>ಕಳೆದ 3 ವರ್ಷಗಳಲ್ಲಿ ವಿವಿಧ ಯೋಜನೆಗಳಡಿ 3,039 ಅಂಗನವಾಡಿ ಕಟ್ಟಡಗಳನ್ನು ನಿರ್ಮಾಣ ಮಾಡಲು ಮಂಜೂರಾತಿ ನೀಡಲಾಗಿದ್ದು, ವಿವರಗಳು ಈ ಕೆಳಗಿನಂತಿದೆ.<br>
<table>
<tr><th>ವರ್ಷ</th><th>ಯೋಜನೆ</th><th>ಘಟಕ ವೆಚ್ಚ</th><th>ಮಂಜೂರಾದ ಅಂ.ಕೇಂದ್ರಗ</th></tr>
<tr><td>2020-21</td><td rowspan="3">ನರೇಗಾ ಒಗ್ಗೂಡಿಸುವಿಕೆ</td><td>10.00</td><td>100</td></tr>
<tr><td>2021-22</td><td>10.00</td><td>100</td></tr>
<tr><td>2022-23</td><td>20.00</td><td>400</td></tr>
<tr><td>2022-23</td><td>ನಗರ ಅಂಗನವಾಡಿ ಕಟ್ಟಡಗಳ ನಿರ್ಮಾಣ</td><td>20.00</td><td>56</td></tr>
<tr><td>2020-21</td><td rowspan="3">ವಿಶೇಷ ಅಭಿವೃದ್ಧಿ ಯೋಜನೆ</td><td>10.00</td><td>398</td></tr>
<tr><td>2021-22</td><td>10.00</td><td>400</td></tr>
<tr><td>2022-23</td><td>20.00</td><td>100</td></tr>
<tr><td>2020-21</td><td>ನಬಾರ್ಡ್-RIDF-25</td><td>16.00/17.00</td><td>306</td></tr>
</table></td></tr>
</table>

| | | | |
|---|---|---|---|
| 2021-22 | | 16.00/17.00 | 271 |
| 2022-23 | | 16.00/17.00 | 265 |
| 2020-21 | SCSP/TSP ಉಳಿಕೆ ಅನುದಾನ | 16.50/18.00 | 19 |
| 2021-22 | | 10.00 | 09 |
| 2022-23 | | 2.00 | 02 |
| 2020-21 | ಕೇಂದ್ರ & ರಾಜ್ಯ ಸರ್ಕಾರದ ಸಹಭಾಗಿತ್ವ | 16.50/18.00 | 512 |
| 2021-22 | | 20.00 | 101 |
| ಒಟ್ಟು | | | 3039 |

**ಸಂಖ್ಯೆ: ಮಮಇ 68 ಸ್ತ್ರೀಮರ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು**

# ಅನುಬಂಧ

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

### ಮಹಿಳೆಯರ ಹಾಗೂ ಮಕ್ಕಳ ಸ್ವಾವಲಂಬನೆ ಹಾಗೂ ಸಮಗ್ರ ಅಭಿವೃದ್ಧಿ ಸಬಲೀಕರಣಕ್ಕಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು/ಕಾರ್ಯಕ್ರಮಗಳ ವಿವರ.

- **ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮ, ಮಾತೃ ಪೂರ್ಣ, ಕ್ಷೀರಭಾಗ್ಯ & ಸೃಷ್ಠಿ ಯೋಜನೆ**:- ಪೂರಕ ಪೌಷ್ಠಿಕ ಆಹಾರ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಸದರಿ ಯೋಜನೆಯನ್ನು ಶೇಕಡ 50:50ರ ಅನುಪಾತದಲ್ಲಿ ಕೇಂದ್ರ & ರಾಜ್ಯ ಸರ್ಕಾರವು ಅನುಷ್ಠಾನಗೊಳಿಸುತ್ತಿದೆ. ಈ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಮಕ್ಕಳಿಗೆ 500 ಕ್ಯಾಲೋರಿಗಳನ್ನು, 12-15 ಗ್ರಾಂ ಪ್ರೋಟೀನ್, ಗರ್ಭಿಣಿ / ಬಾಣಂತಿ/ ಪ್ರಾಯಪೂರ್ವ ಬಾಲಕಿಯರಿಗೆ 600 ಕ್ಯಾಲೋರಿಗಳನ್ನು ಮತ್ತು 18-20 ಗ್ರಾಂ ಪ್ರೋಟಿನ್ ಅಲ್ಲದೇ ತೀವ್ರ ಅಪೌಷ್ಠಿಕತೆಯುಳ್ಳ ಮಕ್ಕಳಿಗೆ 800 ಕ್ಯಾಲೋರಿಗಳನ್ನು ಮತ್ತು 20-25 ಗ್ರಾಂ ಪ್ರೋಟಿನ್ ನೀಡುವ ಉದ್ದೇಶದಿಂದ ಯೋಜನೆಯಡಿ ಪೂರಕ ಪೌಷ್ಠಿಕ ಆಹಾರ ನೀಡಲಾಗುತ್ತಿದೆ. ಸದರಿ ಯೋಜನೆಯಡಿ ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ಸಾಮಾನ್ಯ ಮಕ್ಕಳಿಗೆ ಪ್ರತಿ ದಿನ ರೂ.8.00/- ರಂತೆ, ಗರ್ಭಿಣಿ/ ಬಾಣಂತಿ/ ಪ್ರಾಯಪೂರ್ವ ಬಾಲಕಿಯರಿಗೆ ಘಟಕ ವೆಚ್ಚ ರೂ. 9.50/- ರಂತೆ ಮತ್ತು ತೀವ್ರ ಅಪೌಷ್ಠಿಕತೆಯುಳ್ಳ ಮಕ್ಕಳಿಗೆ ರೂ. 12.00/-ರ ಘಟಕ ವೆಚ್ಚವನ್ನು ನಿಗದಿಪಡಿಸಲಾಗಿದೆ. ಇದರ ಜೊತೆಗೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ ಮಕ್ಕಳಿಗೆ ಕ್ಷೀರಭಾಗ್ಯ & ಸೃಷ್ಠಿ (ಮೊಟ್ಟೆ) ಯೋಜನೆಯನ್ನು ಹಾಗೂ ಗರ್ಭಿಣಿ/ ಬಾಣಂತಿಯರಿಗೆ ಮಾತೃಪೂರ್ಣ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- **ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ**:- ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯನ್ನು 2017-18ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯು ಸಹ ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಈ ಯೋಜನೆಯನ್ನು ಶೇಕಡ 60:40ರ ಅನುಪಾತದಲ್ಲಿ ಕೇಂದ್ರ & ರಾಜ್ಯ ಸರ್ಕಾರವು ಅನುಷ್ಠಾನಗೊಳಿಸುತ್ತಿದೆ. ಗರ್ಭಿಣಿ/ ಬಾಣಂತಿಯರ ಆರೋಗ್ಯ ಮಟ್ಟವನ್ನು ಸುಧಾರಿಸುವ ನಿಟ್ಟಿನಲ್ಲಿ ಉತ್ತಮ ವಾತಾವರಣವನ್ನು ಸೃಷ್ಠಿಸಲು ನಗದು ರೂಪದಲ್ಲಿ ಪ್ರೋತ್ಸಾಹದನವನ್ನು ಅರ್ಹ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆ ಮೂಲಕ ಜಮ ಮಾಡಲಾಗುವುದು.

- **ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚ ಭರಿಸುವ ಯೋಜನೆ**:- ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ ಮಕ್ಕಳಲ್ಲಿ ತೀವ್ರ ನ್ಯೂನಪೋಷಣೆಗೊಳಗಾದ ಮಕ್ಕಳ ಪೌಷ್ಠಿಕ ಮಟ್ಟ ಸುಧಾರಿಸಿ ಸಾಮಾನ್ಯ ದರ್ಜೆಗೆ ತರಲು ವೈದ್ಯಾಧಿಕಾರಿಗಳ ಶಿಫಾರಸ್ಸಿನಂತೆ ಔಷಧೋಪಚಾರ ಹಾಗೂ ಚಿಕಿತ್ಸಾ ಆಹಾರಕ್ಕಾಗಿ ಪ್ರತಿ ಮಗುವಿಗೆ ವರ್ಷಕ್ಕೆ ರೂ.2000/-ಗಳನ್ನು ನೀಡಲಾಗುತ್ತಿದೆ.

- **ಎನ್.ಪಿ.ಎಸ್. ಲೈಟ್ ಯೋಜನೆ**: ಎನ್.ಪಿ.ಎಸ್. ಲೈಟ್ ಯೋಜನೆಯಡಿ ನೋಂದಣಿಯಾಗಿರುವ ಅಂಗನವಾಡಿ ಕಾರ್ಯಕರ್ತೆಯ ಗೌರವಧನದಲ್ಲಿ ರೂ.150/- ಮತ್ತು ಸಹಾಯಕಿಯರಿಗೆ ರೂ.84/- ಗಳನ್ನು ಪ್ರತಿ ಮಾಹೆ ಕಡಿತಗೊಳಿಸುವ ಮೊತ್ತಕ್ಕೆ ಅಷ್ಟೇ ಮೊತ್ತದ ವಂತಿಕೆಯನ್ನು ಸರ್ಕಾರ ಭರಿಸುತ್ತಿದೆ. ಎನ್.ಪಿ.ಎಸ್. ಲೈಟ್ ಯೋಜನೆಯಿಂದ ವಂಚಿತರಾಗಿದ್ದು ನಿವೃತ್ತಿ ಹೊಂದಿರುವ ಅಂಗನವಾಡಿ ಕಾರ್ಯಕರ್ತೆಯರಿಗೆ ಇಡಿಗಂಟು ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.50,000/- ಹಾಗೂ ಸಹಾಯಕಿಯರಿಗೆ ರೂ.30,000/- ನೀಡಲಾಗುತ್ತಿದೆ. ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರು ಸೇವೆಯಲ್ಲಿದ್ದಾಗಲೇ ಮರಣ ಹೊಂದಿದ್ದಲ್ಲಿ ತಲಾ ರೂ.50,000/- ಗಳಂತೆ ಸದರಿಯವರ ವಾರಸುದಾರರಿಗೆ ನೀಡಲಾಗುತ್ತಿದೆ. ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ ತೀವ್ರತರವಾದ ಖಾಯಿಲೆಗಳಿಗೆ ಆರ್ಥಿಕ ಸೌಲಭ್ಯವಾಗಿ ತಲಾ ಗರಿಷ್ಠ ಮೊತ್ತ ರೂ.50,000/- ಗಳನ್ನು ನೀಡಲಾಗುತ್ತಿದೆ.

- **ಶಿಶುಪಾಲನಾ ಕೇಂದ್ರಗಳು**: ಸದರಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಶೇಕಡ 60:40ರ ಅನುಪಾತದಲ್ಲಿ ಕೇಂದ್ರ & ರಾಜ್ಯ ಸರ್ಕಾರವು ಅನುಷ್ಠಾನಗೊಳಿಸುತ್ತಿದೆ. ಉದ್ಯೋಗಸ್ಥ ತಾಯಂದಿರ 6 ವರ್ಷದೊಳಗಿನ ಮಕ್ಕಳ ಪಾಲನೆ ಪೋಷಣೆಯೊಂದಿಗೆ ತಾಯಂದಿರು ತಮ್ಮ ಕೆಲಸದ ಅವಧಿಯನ್ನು ಮುಗಿಸಿ ಮರಳುವವರೆಗೂ ಮಕ್ಕಳನ್ನು ಸುರಕ್ಷಿತವಾಗಿ ನೋಡಿಕೊಳ್ಳಲಾಗುವುದು.

❖ **ಸ್ತ್ರೀಶಕ್ತಿ ಯೋಜನೆ :**

- **ಸುತ್ತು ನಿಧಿ** : ಆದಾಯೋತ್ಪನ್ನ ಚಟುವಟಿಕೆಗಾಗಿ ಪ್ರತಿ ಸ್ತ್ರೀ ಶಕ್ತಿ ಗುಂಪಿಗೆ ತಲಾ ರೂ.5000/- ದಂತೆ ಸುತ್ತುನಿಧಿಯನ್ನು ಹಂತಹಂತವಾಗಿ ನೀಡಲಾಗುತ್ತಿದೆ.

  - **ಕಿಟ್ ಸಾಮಗ್ರಿ**: ಪ್ರತಿ ಗುಂಪಿಗೆ ರೂ.600/- ರಂತೆ ಅವಶ್ಯವಿರುವ 9 ಪುಸ್ತಕ ಹಾಗೂ ಟ್ರಂಕ್‌ಗಳನ್ನೊಳಗೊಂಡ ಕಿಟ್‌ನ್ನು ಎಲ್ಲಾ ಗುಂಪುಗಳಿಗೂ ವಿತರಿಸಲಾಗಿದೆ.

  - **ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿರುವ ಗುಂಪುಗಳಿಗೆ ಪ್ರೋತ್ಸಾಹಧನ**: ಸ್ತ್ರೀಶಕ್ತಿ ಗುಂಪುಗಳು ವಿವಿಧ ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿ ಆರ್ಥಿಕವಾಗಿ ಸಬಲರಾಗುತ್ತಿದ್ದಾರೆ. ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ಕೃಷಿ ಆಧಾರಿತ ಚಟುವಟಿಕೆಗಳಾದ ನರ್ಸರಿ, ತರಕಾರಿ, ಇತರೆ ವ್ಯಾಪಾರಿ ಹೂವುಗಳು, ಹಣ್ಣು, ಅಣಬೆ ಬೆಳೆಯುವುದು, ಎರೆಹುಳು ಗೊಬ್ಬರ ತಯಾರಿಕೆ, ಇತ್ಯಾದಿ ಮತ್ತು ಕೃಷಿಯೇತರ ಚಟುವಟಿಕೆಗಳಲ್ಲಿ ಸಿದ್ಧ ಉಡುಪು, ಉಪ್ಪಿನ ಕಾಯಿ, ಹಪ್ಪಳ, ಸಾಂಬಾರುಪುಡಿ ತಯಾರಿಕೆ, ಕಂಬಳಿ ನೇಯ್ಗೆ, ಬ್ಯೂಟಿಪಾರ್ಲರ್, ಎಲೆಕ್ಟ್ರಾನಿಕ್ ವಸ್ತುಗಳ ರಿಪೇರಿ, ಎಂಬ್ರಾಯಿಡರಿ, ಫ್ಯಾಷನ್ ಡಿಸೈನಿಂಗ್, ಸಣ್ಣ ವ್ಯಾಪಾರ ಇತ್ಯಾದಿ ಚಟುವಟಿಕೆಗಳಲ್ಲಿ ತೊಡಗಿರುತ್ತಾರೆ. ಗುಂಪಿನ ಸದಸ್ಯರು ಉತ್ಪಾದಿಸುವ ವಸ್ತುಗಳಿಗೆ ಸೂಕ್ತ ಮಾರುಕಟ್ಟೆ ಕಲ್ಪಿಸಲು ಇಲಾಖೆಯ ಮೂಲಕ ಬ್ರಾಂಡ್ ಕೂಡ ಬಿಡುಗಡೆ ಮಾಡಲಾಗಿದೆ. ಆದಾಯೋತ್ಪನ್ನ ಚಟುವಟಿಕೆಯಲ್ಲಿ ತೊಡಗಿರುವ ಸ್ತ್ರೀ ಶಕ್ತಿ ಗುಂಪುಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಗುಂಪುಗಳಿಗೆ ತಲಾ ರೂ. 5,000/-ದಂತೆ ಪ್ರೋತ್ಸಾಹಧನ ನೀಡಲಾಗುತ್ತಿದೆ.

❖ **ಅಧಿಕ ಉಳಿತಾಯ ಮಾಡಿರುವ ಗುಂಪುಗಳಿಗೆ ಪ್ರೋತ್ಸಾಹಧನ**: ಗುಂಪುಗಳಲ್ಲಿ ಉಳಿತಾಯ ಮನೋಭಾವನೆಯನ್ನು ಪ್ರೋತ್ಸಾಹಿಸಲು, ರೂ.75,000/- ದಿಂದ ರೂ. 1.00 ಲಕ್ಷದವರೆಗೆ ಉಳಿತಾಯ ಮಾಡಿರುವ ಗುಂಪುಗಳಿಗೆ ತಲಾ ರೂ.15000/- ಗಳ ಹಾಗೂ ರೂ. 1.00 ಲಕ್ಷಕ್ಕೂ ಹೆಚ್ಚು ಉಳಿತಾಯ ಮಾಡಿರುವ ಗುಂಪುಗಳಿಗೆ ತಲಾ ರೂ.20,000ಗಳ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.

❖ **ಸಾಲದ ಮೇಲಿನ ಬಡ್ಡಿಗೆ ಶೇಕಡ 6ರ ಸಹಾಯ ಧನ**: ರೂ.25,000/-ದಿಂದ 1.00 ಲಕ್ಷದವರೆಗೆ ಸಾಲವನ್ನು ಪಡೆಯುವ ಸ್ತ್ರೀಶಕ್ತಿ ಗುಂಪುಗಳಿಗೆ, ಸಾಲದ ಮೇಲಿನ ಬಡ್ಡಿ ದರಕ್ಕೆ ಶೇಕಡ 6ರ ಸಹಾಯಧನವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

❖ **ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ**: ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಗಳನ್ನು ಏರ್ಪಡಿಸಲು ಪ್ರತಿ ಜಿಲ್ಲೆಗೆ ಪ್ರತಿ ವರ್ಷ ರೂ.75,000 ಗಳನ್ನು ಬಿಡುಗಡೆಗೊಳಿಸಲಾಗಿದೆ. ಮಹಿಳಾ ದಿನಾಚರಣೆ ಸಂದರ್ಭದಲ್ಲಿ ರಾಜ್ಯ ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳದಲ್ಲಿ ಮತ್ತು ಕೃಷಿ ಮೇಳಗಳಲ್ಲಿಯೂ ಸ್ತ್ರೀಶಕ್ತಿ ಗುಂಪುಗಳು ಉತ್ಪಾದಿಸುವ ವಸ್ತುಗಳನ್ನು ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗುತ್ತಿದೆ.

❖ **ತಾಲ್ಲೂಕು ಮಟ್ಟದ ಬ್ಲಾಕ್ ಸೊಸೈಟಿ ಫೆಡರೇಷನ್**: 175 ತಾಲ್ಲೂಕುಗಳಲ್ಲಿ ತಾಲ್ಲೂಕು ಮಟ್ಟದ ಬ್ಲಾಕ್ ಸೊಸೈಟಿ ಫೆಡರೇಷನ್‌ಗಳನ್ನು ರಚಿಸಿ, ಸಹಕಾರ ಇಲಾಖೆಯ ಸೊಸೈಟಿ ಕಾಯ್ದೆ 1960 ರಡಿ ನೊಂದಾಯಿಸಲಾಗಿದ್ದು ಪ್ರತಿ ವರ್ಷ ಫೆಡರೇಷನ್‌ಗೆ ರೂ.30000/-ಗಳಂತೆ ಅವುಗಳ ಬಲವರ್ಧನೆಗಾಗಿ ತಲಾ ರೂ. ಒಟ್ಟು ರೂ.30000/- ಬಿಡುಗಡೆ ಮಾಡಲಾಗಿದೆ. ಒಕ್ಕೂಟದ ಪ್ರತಿನಿಧಿಗಳಿಗೆ ರಾಜ್ಯ ಮಟ್ಟದಲ್ಲಿ ಬಲವರ್ಧನೆಗಾಗಿ ಬಿಡುಗಡೆಗೊಳಿಸಿರುವ ಅನುದಾನದ ಉಪಯೋಗದ ಕುರಿತು 1 ದಿನದ ತರಬೇತಿಯನ್ನು ನೀಡಲಾಗಿದೆ.

❖ **ಅತ್ಯುತ್ತಮ ಸ್ತ್ರೀಶಕ್ತಿ ಗುಂಪುಗಳ ಪ್ರಶಸ್ತಿ**: ಪ್ರತಿ ವರ್ಷ ಮಾರ್ಚ್ 8ರಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ರಾಜ್ಯದಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಸ್ತ್ರೀಶಕ್ತಿ ಗುಂಪುಗಳನ್ನು ಪ್ರೋತ್ಸಾಹಿಸಲು ಗುಂಪುಗಳನ್ನು ಗುರುತಿಸಿ, ತಾಲ್ಲೂಕು ಮಟ್ಟದಲ್ಲಿ ತಲಾ ರೂ.2000/-, ಜಿಲ್ಲಾ ಮಟ್ಟದಲ್ಲಿ ರೂ.5000/-, ಮತ್ತು ರಾಜ್ಯ ಮಟ್ಟದಲ್ಲಿ ಮೊದಲನೇ ಅತ್ಯುತ್ತಮ ಗುಂಪಿಗೆ ರೂ.50,000/-, ಎರಡನೇ ಅತ್ಯುತ್ತಮ ಗುಂಪಿಗೆ ರೂ.30,000/- ಮತ್ತು ಮೂರನೇ ಅತ್ಯುತ್ತಮ ಗುಂಪಿಗೆ ರೂ.20,000/- ನಗದು ಬಹುಮಾನದೊಂದಿಗೆ ಪ್ರಶಸ್ತಿ ಪತ್ರಗಳನ್ನು ನೀಡಿ ಗೌರವಿಸಲಾಗುತ್ತಿದೆ. ಶ್ರೀಮತಿ ಯಶೋಧರಮ್ಮ ದಾಸಪ್ಪ ಇವರ ಹೆಸರಿನಲ್ಲಿ ನಾಲ್ಕು ಅತ್ಯುತ್ತಮ ಸ್ತ್ರೀಶಕ್ತಿ ಗುಂಪುಗಳನ್ನು ನಾಲ್ಕು ಕಂದಾಯ ವಿಭಾಗಗಳಿಂದ ಗುರುತಿಸಿ ತಲಾ ರೂ.25,000/- ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುತ್ತಿದೆ.

❖ **ತಾಲ್ಲೂಕು ಒಕ್ಕೂಟಗಳಿಗೆ ಪ್ರಶಸ್ತಿ**: 2010-2011 ನೇ ಸಾಲಿನಿಂದ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ತಾಲ್ಲೂಕು ಒಕ್ಕೂಟಗಳಿಗೆ ರಾಜ್ಯ ಮಟ್ಟದಲ್ಲಿ 3 ಪ್ರಶಸ್ತಿಗಳನ್ನು ನೀಡುವ

ಯೋಜನೆಯನ್ನು ಜಾರಿಗೊಳಿಸುತ್ತಿದ್ದು, ಅದರಂತೆ, ಮೊದಲನೇ ಅತ್ಯುತ್ತಮ ಒಕ್ಕೂಟಕ್ಕೆ ರೂ.80,000/-, ಎರಡನೇ ಅತ್ಯುತ್ತಮ ಒಕ್ಕೂಟಕ್ಕೆ ರೂ.70,000/-, ಮೂರನೇ ಅತ್ಯುತ್ತಮ ಒಕ್ಕೂಟಕ್ಕೆ ರೂ.60,000/- ನಗದು ಬಹುಮಾನದೊಂದಿಗೆ ಪ್ರಶಸ್ತಿ ಪತ್ರಗಳನ್ನು ನೀಡಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ದಿನದಂದು ಗೌರವಿಸಲಾಗುತ್ತದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲೆಗೊಂದು ಅತ್ಯುತ್ತಮ ತಾಲ್ಲೂಕು ಒಕ್ಕೂಟಕ್ಕೆ ರೂ.10,000/- ನಗದು ಬಹುಮಾನದೊಂದಿಗೆ ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುತ್ತಿದೆ.

- **ತರಬೇತಿ:** ಸ್ತ್ರೀ ಶಕ್ತಿ ಯೋಜನೆಯ ಅನುಷ್ಠಾನದ ಬಗ್ಗೆ ಕ್ಷೇತ್ರ ಮಟ್ಟದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಸಿಬ್ಬಂದಿ, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಗುಂಪಿನ ಸದಸ್ಯರಿಗೆ ಓರಿಯಂಟೇಶನ್, ಲಿಂಗತ್ವ, ನಾಯಕತ್ವ, ಸಂವಹನ, ಲೆಕ್ಕ ಪತ್ರ ನಿರ್ವಹಣೆ, ಸಾಲ ನಿರ್ವಹಣೆ ಮತ್ತು ಸಾಮಾಜಿಕ ವಿಷಯಗಳ ಬಗ್ಗೆ ವಿವಿಧ ಹಂತಗಳಲ್ಲಿ ತರಬೇತಿ ನೀಡಲಾಗುತ್ತಿದೆ. ಆದಾಯೋತ್ಪನ್ನ ಚಟುವಟಿಕೆಯನ್ನು ಹಮ್ಮಿಕೊಂಡು ಉತ್ತಮ ಗುಣಮಟ್ಟದ ವಸ್ತುಗಳನ್ನು ಉತ್ಪಾದಿಸಲು ಅನುವಾಗುವಂತೆ ಕೌಶಲ್ಯ ಅಭಿವೃದ್ಧಿ ತರಬೇತಿಯನ್ನು ನೀಡಲಾಗುತ್ತಿದೆ. ದೀರ್ಘಾವಧಿಯ ಕೌಶಲ್ಯ ತರಬೇತಿಯನ್ನು ಪ್ರತಿ ಗುಂಪಿಗೆ ಇಬ್ಬರು ಸದಸ್ಯರಂತೆ ಒಟ್ಟು 25 ಸದಸ್ಯರ ತಂಡದ 5 ದಿನಗಳ ತರಬೇತಿಯನ್ನು ನೀಡಲಾಗಿದೆ.

- **ಗೊಂಚಲು/ಬ್ಲಾಕ್ ಸೊಸೈಟಿ ಬಲವರ್ಧನೆಗಾಗಿ ತರಬೇತಿ**: ಸ್ತ್ರೀ ಶಕ್ತಿ ಗೊಂಚಲು/ ಒಕ್ಕೂಟಗಳ ಬಲವರ್ಧನೆಗಾಗಿ ಸ್ತ್ರೀ ಶಕ್ತಿ ಗುಂಪಿನ ಸದಸ್ಯರು ಹಾಗೂ ಕ್ಷೇತ್ರಮಟ್ಟದ ಇಲಾಖಾ ಸಿಬ್ಬಂದಿಯವರಿಗೆ ಲಿಂಗತಾರತಮ್ಯ, ನಾಯಕತ್ವ, ಪುನಶ್ಚೇತನ, ಸಂವಹನ, ಪುಸ್ತಕ ನಿರ್ವಹಣೆ, ಸಾಲ ನಿರ್ವಹಣೆ ಹಾಗೂ ಸಾಮಾಜಿಕ ವಿಷಯಗಳ ಕುರಿತು 4 ಹಂತಗಳಲ್ಲಿ ತರಬೇತಿ ನೀಡಲಾಗಿದೆ. ನಬಾರ್ಡ್ ಸಂಸ್ಥೆಯ ಸಹಯೋಗದೊಂದಿಗೆ ಒಕ್ಕೂಟದ 1573 ಕಾರ್ಯಕಾರಿ ಸಮಿತಿ ಸದಸ್ಯರಿಗೆ ತರಬೇತಿ ನೀಡಲಾಗಿದೆ.

- **ಜಿಲ್ಲಾ ಮಾರುಕಟ್ಟೆ ಸಂಕೀರ್ಣ** : ಸ್ತ್ರೀ ಶಕ್ತಿ ಗುಂಪುಗಳು ತಾವು ತಯಾರಿಸಿದ ವಸ್ತುಗಳಿಗೆ ಮಾರುಕಟ್ಟೆ ಸೌಲಭ್ಯವಿಲ್ಲದೆ ತಯಾರಿಸಿದ ಉತ್ಪನ್ನಗಳನ್ನು ಮಾರಾಟ ಮಾಡಲು ಹಾಗೂ ದೊಡ್ಡ ಉದ್ಯಮಿಗಳೊಂದಿಗೆ ಸ್ಪಂದಿಸಲು ಸಾಧ್ಯವಾಗದೇ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ನಿಟ್ಟಿನಲ್ಲಿ ಇಲಾಖೆಯು ಗುಂಪುಗಳ ಕೈ ಬಲಪಡಿಸಲು ಸ್ತ್ರೀ ಶಕ್ತಿ ಭವನ/ ಮಾರುಕಟ್ಟೆ ಮಳಿಗೆಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಿರ್ಮಿಸಲು ಆರ್ಥಿಕ ಸಹಾಯ ನೀಡುವ ಯೋಜನೆಯನ್ನು ಜಾರಿಗೆ ತರಲಾಗಿದ್ದು, 2006-2007ನೇ ಸಾಲಿನಲ್ಲಿ ಜಿಲ್ಲಾ ಮಾರುಕಟ್ಟೆ ಮಳಿಗೆಗಳನ್ನು ನಿರ್ಮಿಸಲು ಪ್ರಾರಂಭಿಸಿದ್ದು, ಇದುವರೆಗೆ 29 ಜಿಲ್ಲೆಗಳಲ್ಲಿ ಜಿಲ್ಲಾ ಮಾರುಕಟ್ಟೆ ಮಳಿಗೆಗಳನ್ನು ನಿರ್ಮಿಸಲಾಗಿದೆ.

- **ತಾಲ್ಲೂಕು ಮಾರುಕಟ್ಟೆ ಭವನ / ಮಳಿಗೆಗಳ ನಿರ್ಮಾಣ**: ಹೆಚ್ಚಿನ ಪ್ರಮಾಣದಲ್ಲಿ ಗುಂಪುಗಳು ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಸಲುವಾಗಿ ತದನಂತರ ಹಂತ ಹಂತವಾಗಿ ತಾಲ್ಲೂಕು ಮಟ್ಟದಲ್ಲಿ ಮಾರುಕಟ್ಟೆ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ 166 ತಾಲ್ಲೂಕು ಮಾರಾಟ ಮಳಿಗೆಗಳನ್ನು ಮಂಜೂರು ಮಾಡಲಾಗಿದೆ.

- **ವಿಭಾಗೀಯ ಮಟ್ಟದ ತರಬೇತಿ ಕೇಂದ್ರ ನಿರ್ಮಾಣ**: 2010-2011 ರಿಂದ 2012-2013ನೇ ಸಾಲಿನಲ್ಲಿ ಬೆಂಗಳೂರು, ಕಲಬುರ್ಗಿ, ಗದಗ ಮತ್ತು ಮೈಸೂರು ಇಲ್ಲಿ ವಿಭಾಗೀಯ ಮಟ್ಟದ 4 ತರಬೇತಿ ಕೇಂದ್ರಗಳನ್ನು ನಿರ್ಮಿಸಲಾಗಿದೆ.

- **ಸ್ತ್ರೀ ಶಕ್ತಿ ಸಮೃದ್ಧಿ ಯೋಜನೆ**:- ಜಿಲ್ಲಾ ಮಟ್ಟದ ಒಕ್ಕೂಟಗಳನ್ನು ರಚಿಸಿ ಇದರ ಮೂಲಕ ತಾಲ್ಲೂಕು ಮಟ್ಟದ ಸ್ತ್ರೀ ಶಕ್ತಿ ಒಕ್ಕೂಟ ಹಾಗೂ ಗೊಂಚಲು ಗುಂಪುಗಳನ್ನು ಬಲವರ್ಧನೆಗೊಳಿಸಲು ಹಾಗೂ ಉತ್ತಮ ನಿರ್ವಹಣೆಗಾಗಿ ಗುಂಪುಗಳ ನಡುವೆ ಸಹಕಾರ ಹಾಗೂ ಸಮನ್ವಯತೆಯನ್ನು ಕಾಯ್ದುಕೊಳ್ಳಲು ಜಿಲ್ಲಾ ಮಟ್ಟದ ಒಕ್ಕೂಟಗಳನ್ನು ರಚಿಸಲಾಗಿದೆ.

- **ಕೌಶಲ್ಯ/ಉದ್ಯಮಶೀಲತೆ ತರಬೇತಿಗಳು** :- ಸ್ತ್ರೀ ಶಕ್ತಿ ಯೋಜನೆಯಡಿ ಆಯ್ದ ಮತ್ತು ಆಸಕ್ತ ಸ್ತ್ರೀ ಶಕ್ತಿ ಗುಂಪುಗಳಿಗೆ, ಜಿಲ್ಲಾ ಮತ್ತು ತಾಲ್ಲೂಕು ಒಕ್ಕೂಟದ ಪದಾಧಿಕಾರಿಗಳಿಗೆ ಕಾಲಕಾಲಕ್ಕೆ ತರಬೇತಿಗಳನ್ನು ಅನುದಾನ ಲಭ್ಯತೆಗನುಗುಣವಾಗಿ ಹಮ್ಮಿಕೊಳ್ಳಗಾತ್ತಿದೆ. (ಕಂಪ್ಯೂಟರ್, ಸಾಮರ್ಥ್ಯಾಭಿವೃದಿ, ವ್ಯಕ್ತಿತ್ವ ವಿಕಸನ ಅಭಿವೃದ್ಧಿ, ಕೌಶಲ್ಯಾಧಾರಿತ ಮತ್ತು ಉದ್ಯಮಶೀಲತ ತರಬೇತಿ)

- **ಅಮೃತ ಕಿರು ಉದ್ದಿಮೆ ಯೋಜನೆ**: 2021-22ನೇ ಸಾಲಿನಲ್ಲಿ 75 ನೇ ಸ್ವಾತಂತ್ರ್ಯ ಮಹೋತ್ಸವದಂದು ಮಾನ್ಯ ಮುಖ್ಯ ಮಂತ್ರಿಗಳು 7500 ಮಹಿಳಾ ಸ್ವಸಹಾಯ ಗುಂಪುಗಳನ್ನು ಕಿರು ಉದ್ದಿಮೆಗಳನ್ನಾಗಿ ಪರಿವರ್ತಿಸುವ ದೃಷ್ಟಿಯಿಂದ ಪ್ರತಿ ಗುಂಪಿಗೆ ರೂ.1.00 ಲಕ್ಷ ದಂತೆ 75.00 ಕೋಟಿ ಬೀಜಧನ ನೀಡುವ ಅಮೃತ ಸ್ವಸಹಾಯ ಕಿರು ಉದ್ದಿಮೆಗಳ ಯೋಜನೆಯನ್ನು ಘೋಷಣೆ ಮಾಡಿರುತ್ತಾರೆ. ಜಿಲ್ಲಾ ಉಸ್ತುವಾರಿ ಅಧ್ಯಕ್ಷತೆಯಲ್ಲಿ ರಚನೆಯಾಗಿರುವ ಆಯ್ಕೆ ಸಮಿತಿಗಳ ಮುಖಾಂತರ ಸ್ವೀಕೃತವಾದ ಪ್ರಸ್ತಾವನೆಗಳಿಗೆ ಮಂಜೂರಾತಿ ನೀಡಲಾಗಿರುತ್ತದೆ. ಸದರಿ ಗುಂಪುಗಳಿಗೆ ಬೀಜಧನ ಬಿಡುಗಡೆ ಮಾಡುವ ಸಲುವಾಗಿ ರೂ.75.00 ಕೋಟಿ ಅನುದಾನವನ್ನು ಮಹಿಳಾ ಅಭಿವೃದ್ಧಿ ನಿಗಮಕ್ಕೆ ಬಿಡುಗಡೆಗೊಳಿಸಲಾಗಿರುತ್ತದೆ.

- **ಸಾಂತ್ವನ ಯೋಜನೆ:-** ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರಕ್ಕೊಳಗಾದ ಮಹಿಳೆಯರಿಗೆ ಕಾನೂನು ನೆರವು ಹಾಗೂ ಸಮಾಲೋಚನೆಯನ್ನು ಒದಗಿಸಲಾಗುತ್ತಿದೆ. ಪ್ರಸ್ತುತ 178 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

- **ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006:-** ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ಉಂಟಾದಾಗ, ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸುತ್ತಿದೆ.

- **ರಾಜ್ಯ ಸರ್ಕಾರದ ಉದ್ಯೋಗಸ್ಥ ಮಹಿಳೆಯರಿಗೆ ವಸತಿ ನಿಲಯಗಳು:-**2022-23ನೇ ಸಾಲಿನಲ್ಲಿ ಬೆಂಗಳೂರು ನಗರ, ಮೈಸೂರು, ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ದಕ್ಷಿಣ ಕನ್ನಡ ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ 24 ಉದ್ಯೋಗಸ್ಥ ಮಹಿಳೆಯರಿಗೆ ವಸತಿ ನಿಲಯಗಳನ್ನು ಬಾಡಿಗೆ ಕಟ್ಟಡಗಳಲ್ಲಿ ಹೊಸದಾಗಿ ಪ್ರಾರಂಭಿಸಲಾಗುತ್ತಿದೆ. ಗಾರ್ಮೆಂಟ್ಸ್, ಕೈಗಾರಿಕೆಗಳು ಮತ್ತು ಇತರ ಅಸಂಘಟಿತ ವಲಯಗಳಲ್ಲಿ ಕೆಲಸ ಮಾಡುವ ಮಹಿಳೆಯರಿಗೆ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಅಲ್ಪಸಂಖ್ಯಾತರ ದುಡಿಯುವ ಮಹಿಳೆಯರಿಗೆ ಆದ್ಯತೆ ಮೇರೆಗೆ ಸೌಲಭ್ಯ ನೀಡಲಾಗುವುದು.

- **ಸ್ವಾಧಾರ ಗೃಹ:-** ಸಂಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ತಾತ್ಕಾಲಿಕ ಆಶ್ರಯ, ವೈದ್ಯಕೀಯ ಸೇವೆ, ಸಮಾಲೋಚನೆ, ಕಾನೂನು ನೆರವು ಒದಗಿಸಲಾಗುತ್ತಿದೆ. ಪ್ರಸ್ತುತ ರಾಜ್ಯಾದ್ಯಂತ 52 ಸ್ವಾಧಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

- **ಒನ್ ಸ್ಟಾಪ್ ಸೆಂಟರ್ (ಸಖಿ):-** ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒನ್ ಸ್ಟಾಪ್ ಸೆಂಟರ್‌ನಲ್ಲಿ ಒದಗಿಸಲಾಗುತ್ತಿದೆ. ರಾಜ್ಯದ ಎಲ್ಲಾ 30 ಜಿಲ್ಲೆಗಳಲ್ಲಿ ಒನ್ ಸ್ಟಾಪ್ ಸೆಂಟರ್ (ಸಖಿ)ಗಳು ಕಾರ್ಯನಿರ್ವಹಿಸುತ್ತಿವೆ.

- **ಕೇಂದ್ರ ಸರ್ಕಾರದ ಉದ್ಯೋಗಸ್ಥ ಮಹಿಳೆಯರ ವಸತಿಗೃಹ ನಿರ್ಮಾಣ ಯೋಜನೆ:**(65:25:10) ಉದ್ಯೋಗಸ್ಥ ಮಹಿಳೆಯರಿಗೆ ಹಾಗೂ ಉದ್ಯೋಗಕ್ಕಾಗಿ ತರಬೇತಿ ಪಡೆಯುತ್ತಿರುವ ಮಹಿಳೆಯರಿಗೆ ಕಡಿಮೆ ಬೆಲೆಯಲ್ಲಿ ಸುರಕ್ಷಿತವಾದಂತಹ ವಸತಿ ನಿಲಯಗಳನ್ನು ಒದಗಿಸುವುದಕ್ಕೋಸ್ಕರ ವಸತಿ ಗೃಹಗಳನ್ನು ನಿರ್ಮಿಸಲು ಕೇಂದ್ರ ಸರ್ಕಾರದಿಂದ ಅನುದಾನವನ್ನು ಸ್ವಯಂಸೇವಾ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗುವುದು. ಪ್ರಸ್ತುತ ರಾಜ್ಯದಲ್ಲಿ 65 ಉದ್ಯೋಗಸ್ಥ ಮಹಿಳೆಯರ ವಸತಿಗೃಹಗಳು ಕಾರ್ಯನಿರ್ವಹಿಸುತ್ತಿವೆ.

- **ಭಾಗ್ಯಲಕ್ಷ್ಮಿ - ಸುಕನ್ಯಾ ಸಮೃದ್ಧಿ ಖಾತೆ ಯೋಜನೆ:** ಬಡತನ ರೇಖೆಗಿಂತ ಕೆಳಗಿರುವ ಕುಟುಂಬದಲ್ಲಿ ಜನಿಸಿದ 2 ಹೆಣ್ಣು ಮಕ್ಕಳಿಗೆ ಆರ್ಥಿಕ ಸೌಲಭ್ಯವನ್ನು ನೀಡಲಾಗುವುದು. ಹೆಣ್ಣು ಮಗು ಜನಿಸಿದ 2 ವರ್ಷಗಳ ವರೆಗೆ ನೋಂದಣಿ ಮಾಡಲು ಕಾಲಾವಕಾಶವಿರುತ್ತದೆ. ಈ ಯೋಜನೆಯಡಿ ಬಿಪಿಎಲ್ ಕುಟುಂಬದ 2 ಹೆಣ್ಣು ಮಕ್ಕಳಿಗೆ ಪ್ರತಿ ಮಗುವಿನ ಹೆಸರಿನಲ್ಲಿ ವಾರ್ಷಿಕ ರೂ.3000/-ರಂತೆ 15 ವರ್ಷಗಳವರೆಗೆ ಒಟ್ಟು ರೂ.45,000/-ಗಳನ್ನು ಠೇವಣಿ ಹೂಡಲಾಗುತ್ತದೆ. 21 ವರ್ಷ ಅವಧಿ ಪೂರ್ಣಗೊಂಡ ನಂತರ ಅಂದಾಜು ಪರಿಪಕ್ವ ಮೊತ್ತ ರೂ.1.27ಲಕ್ಷ ಪ್ರಸ್ತುತ ಬಡ್ಡಿ ಸೇರಿದಂತೆ ನೀಡಲಾಗುತ್ತದೆ. 10ನೇ ತರಗತಿ ನಂತರ ಉನ್ನತ ವಿದ್ಯಾಭ್ಯಾಸಕ್ಕಾಗಿ ಖಾತೆಯಲ್ಲಿರುವ ಮೊತ್ತದ ಶೇ.50ರಷ್ಟು ಭಾಗವನ್ನು ಹಿಂಪಡೆಯಲು ಅವಕಾಶವಿರುತ್ತದೆ.

- **ಉಜ್ವಲ ಯೋಜನೆ** : ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯವು ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆಗಟ್ಟಲು ಹಾಗೂ ಸಾಗಾಣಿಕೆಗೆ ಹಾಗೂ ವಾಣಿಜ್ಯ ಲೈಂಗಿಕ ದುರುಪಯೋಗಕ್ಕೆ ಒಳಪಟ್ಟವರನ್ನು ರಕ್ಷಿಸಲು, ಇವರಿಗೆ ಪುನರ್ವಸತಿ ಕಲ್ಪಿಸಲು ಮತ್ತು ಕುಟುಂಬದವರೊಂದಿಗೆ ಪುನರ್ ವಿಲೀನಗೊಳಿಸಲು ರೂಪಿಸಿರುವ ಸಮಗ್ರ ಯೋಜನೆಯಾಗಿರುತ್ತದೆ. ಸದರಿ ಯೋಜನೆಯು ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. ರಾಜ್ಯದಲ್ಲಿ ಪ್ರಸ್ತುತ 15 ಉಜ್ವಲ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

- **ಶಿಶುಪಾಲನಾ ಕೇಂದ್ರಗಳು**: 2021-22 ಮತ್ತು 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆಯಾದಂತೆ ಉದ್ಯೋಗಸ್ಥ ಮಹಿಳೆಯರಿಗೆ ಅನುಕೂಲವಾಗುವ ಸಲುವಾಗಿ ಶಿಶುಪಾಲನಾ ಕೇಂದ್ರಗಳನ್ನು ಪ್ರಾರಂಭಿಸಲಾಗಿರುತ್ತದೆ. ಪ್ರತಿ ಜಿಲ್ಲೆ ಮತ್ತು ಜಿಲ್ಲೆಯ 2 ತಾಲ್ಲೂಕುಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ಸದರಿ ಕೇಂದ್ರಗಳ ಶಿಕ್ಷಕಿ ಮತ್ತು ಸಹಾಯಕಿಯರಿಗೆ ತರಬೇತಿ ನೀಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

- **ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ನಿವಾರಣೆ** : ಈ ಯೋಜನೆಯನ್ನು 2006-07ರಲ್ಲಿ ಜಾರಿಗೆ ತರಲಾಗಿದೆ. ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ ಕುರಿತು ಇಲಾಖಾ ವತಿಯಿಂದ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ರಾಜ್ಯ, ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮ ಪಂಚಾಯತ್ ಮಟ್ಟಗಳಲ್ಲಿ ಸಮಿತಿಗಳು ಕಾರ್ಯ ನಿರ್ವಹಿಸುತ್ತಿವೆ. ಮಾನವ ಸಾಗಾಣಿಕೆಯನ್ನು ತಡೆಗಟ್ಟಲು ಮತ್ತು ಸಾಗಣಿಕೆಗೆ ಒಳಪಟ್ಟ ಮಹಿಳೆಯರ ಮತ್ತು ಮಕ್ಕಳ ಪುನರ್ವಸತಿ ಮಾಡುವುದು ನಾಗರೀಕ ಸಮಾಜದ ಪ್ರತಿಯೊಬ್ಬರ ಕರ್ತವ್ಯವಾಗಿರುತ್ತದೆ.

- **ಬೇಟಿ ಬಚಾವೊ ಬೇಟಿ ಪಡಾವೊ ಕಾರ್ಯಕ್ರಮ** : ಸನ್ಮಾನ್ಯ ಪ್ರಧಾನ ಮಂತ್ರಿಗಳು "ಬೇಟಿ ಬಚಾವೊ ಬೇಟಿ ಪಡಾವೊ ಕಾರ್ಯಕ್ರಮ" ಎಂಬ ಹೊಸ ಯೋಜನೆಯನ್ನು 22 ಜನವರಿ 2015 ರಂದು ರಾಷ್ಟ್ರೀಯ ಮಟ್ಟದಲ್ಲಿ ಜಾರಿಗೆ ತಂದಿರುತ್ತಾರೆ. ಕುಸಿಯುತ್ತಿರುವ ಮಕ್ಕಳ ಲಿಂಗ ಅನುಪಾತವನ್ನು ಉತ್ತಮ ಪಡಿಸುವುದು ಹಾಗೂ ಮಹಿಳೆಯರನ್ನು ಸಬಲೀಕರಣಗೊಳಿಸುವುದು, "ಬೇಟಿ ಬಚಾವೊ ಬೇಟಿ ಪಡಾವೊ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಈ ಯೋಜನೆಯನ್ನು 2022-23 ನೇ ಸಾಲಿನಿಂದ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಲಾಗಿದೆ.

- **ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ** : ಈ ಯೋಜನೆಯು 2006-07ನೇ ಸಾಲಿನಿಂದ ಜಾರಿಗೆ ತರಲಾಗಿದೆ. 6-18 ವರ್ಷದ ವಯೋಮಿತಿಯೊಳಗಿನ ಬಾಲಕರನ್ನು ಹೊಯ್ಸಳ ಪ್ರಶಸ್ತಿಗೆ ಮತ್ತು ಬಾಲಕಿಯರನ್ನು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತದೆ. ಈ ಪ್ರಶಸ್ತಿಯು ರೂ.10,000/-ಗಳ ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಈ ಪ್ರಶಸ್ತಿಗಾಗಿ ಆಯ್ಕೆಯಾದ ಮಕ್ಕಳಿಗೆ ದ್ವಿತೀಯ ಪಿ.ಯು.ಸಿ ಪೂರೈಸುವವರೆಗೂ (18 ವರ್ಷದ ಮಿತಿಯೊಳಗೆ) ವಿದ್ಯಾಭ್ಯಾಸ ಮುಂದುವರೆಸಲು ಪ್ರತಿ ವರ್ಷ ರೂ.2,000/-ಗಳ ಶಿಷ್ಯವೇತನವನ್ನು ನೀಡಲಾಗುವುದು.

- **ಮಕ್ಕಳ ದಿನಾಚರಣೆ ಕಾರ್ಯಕ್ರಮ** : ಅಂತರ ರಾಷ್ಟ್ರೀಯ ಮಕ್ಕಳ ವರ್ಷದ ಅಂಗವಾಗಿ ಭಾರತ ಸರ್ಕಾರವು 1979 ರಲ್ಲಿ ಜಾರಿಗೆ ತಂದ ರಾಷ್ಟ್ರ ಪ್ರಶಸ್ತಿಗೆ ಅನುಗುಣವಾಗಿ ರಾಜ್ಯ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ನಿರತವಾಗಿರುವ ಕನಿಷ್ಠ 5 ವರ್ಷಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿದ 4 ಸಂಸ್ಥೆಗಳನ್ನು ಹಾಗೂ 4 ವ್ಯಕ್ತಿಗಳನ್ನು ಸನ್ಮಾನಿಸಲು ರಾಜ್ಯ ಪ್ರಶಸ್ತಿಯನ್ನು ಜಾರಿಗೆ ತಂದಿರುತ್ತದೆ. ಈ ಪ್ರಶಸ್ತಿಯನ್ನು ಪ್ರತಿ ವರ್ಷ ನವಂಬರ್-14 ರಂದು ಆಚರಿಸಲಾಗುವ ಮಕ್ಕಳ ದಿನಾಚರಣೆಯ ದಿನದಂದು ನೀಡಲಾಗುವುದು.

- **ಬಾಲ್ಯವಿವಾಹ ನಿಷೇಧ ಕಾಯ್ದೆ ಅನುಷ್ಠಾನ ಕಾರ್ಯಕ್ರಮ** : ಬಾಲ್ಯವಿವಾಹವು ಸಾಮಾಜಿಕ ಪಿಡುಗಾಗಿದ್ದು, ಅಪ್ರಾಪ್ತ ವಯಸ್ಕರ ಅಂದರೆ 18 ವರ್ಷಕ್ಕಿಂತ ಕಡಿಮೆ ಇರುವ ಹುಡುಗಿ ಅಥವಾ 21 ವರ್ಷಕ್ಕಿಂತ ಕಡಿಮೆ ಇರುವ ಹುಡುಗನ ವಿವಾಹವು ಕಾನೂನಿನ ಪ್ರಕಾರ ಅಪರಾಧವಾಗಿರುತ್ತದೆ. ಬಾಲ್ಯವಿವಾಹ ತಡೆ ಕುರಿತು ಸಾರ್ವಜನಿಕರಲ್ಲಿ ಅರಿವು ಮತ್ತು ಜಾಗೃತಿ ಮೂಡಿಸುವ ಕಾರ್ಯಕ್ರಮವಾಗಿರುತ್ತದೆ.

- **ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ**:- ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956 ನಿಯಮ 1989ರ ಅಡಿ ರಾಜ್ಯದಲ್ಲಿ 04 ಸ್ವೀಕಾರ ಕೇಂದ್ರಗಳು ಮತ್ತು 08 ರಾಜ್ಯ ಮಹಿಳಾ ನಿಲಯಗಳು ಸರ್ಕಾರದಿಂದ ನಡೆಸಲ್ಪಡುತ್ತಿವೆ. ಸ್ವೀಕಾರ ಕೇಂದ್ರಗಳು 18 ವರ್ಷದ ಮೇಲ್ಪಟ್ಟ ಮಹಿಳೆಯರಿಗೆ ಅಲ್ಪಾವಧಿ ಪುನರ್ವಸತಿ ಕೇಂದ್ರಗಳಾಗಿ ಹಾಗೂ ರಾಜ್ಯ ಮಹಿಳಾ ನಿಲಯಗಳು ದೀರ್ಘಾವಧಿ ಪುನರ್ವಸತಿ ಕೇಂದ್ರಗಳಾಗಿರುತ್ತವೆ. ಆಶ್ರಯ ಮತ್ತು ರಕ್ಷಣೆ ಅಗತ್ಯವಿರುವ ಮಹಿಳೆಯರು ಸ್ವ-ಇಚ್ಛೆಯಿಂದ, ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ, ಯಾವುದೇ ವ್ಯಕ್ತಿಗಳ ಮುಖಾಂತರ, ಪೊಲೀಸರ ಮುಖಾಂತರ ಹಾಗೂ ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956ರ ಅಡಿಯಲ್ಲಿ ನ್ಯಾಯಾಲಯದಿಂದ ಪ್ರಕರಣಗಳಡಿ ದಾಖಲಿಸಲ್ಪಟ್ಟ ಮಹಿಳೆಯರಿಗೆ ಪುನರ್ವಸತಿ ಕಲ್ಪಿಸಲಾಗುತ್ತಿದೆ.

- **ಬಾಲಕಿಯರ ವಸತಿ ನಿಲಯ:** ಗ್ರಾಮಾಂತರ ಹಾಗೂ ಹಿಂದುಳಿದ ಪ್ರದೇಶಗಳ ತಾಲ್ಲೂಕುಗಳ ಹೆಣ್ಣುಮಕ್ಕಳ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು ಹಾಗೂ ಶಾಲೆ ಬಿಡುವುದನ್ನು ತಪ್ಪಿಸಲು ಅನುಕೂಲವಾಗುವಂತೆ ಇಲಾಖಾ ವತಿಯಿಂದ ಬಾಲಕಿಯರ ವಸತಿ ನಿಲಯಗಳನ್ನು ಸ್ವಯಂಸೇವಾ ಸಂಸ್ಥೆಗಳ ಮೂಲಕ ವಿದ್ಯಾರ್ಥಿನಿಯರಿಗೆ ವಸತಿ ಮತ್ತು ಭೋಜನ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಪ್ರಸ್ತುತ ಮೆಟ್ರಿಕ್ ಪೂರ್ವ 19 ಮತ್ತು ಮೆಟ್ರಿಕ್ ನಂತರ 18 ಒಟ್ಟು 37 ನಿಲಯಗಳನ್ನು ರಾಜ್ಯದ 20 ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.

# ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

## ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು:

### (ಎ) ಶೈಕ್ಷಣಿಕ ಯೋಜನೆಗಳು:-

**1) ಶ್ರವಣದೋಷವುಳ್ಳ ಮಕ್ಕಳಿಗಾಗಿ ಸರ್ಕಾರದ ವಸತಿಯುತ ಶಾಲೆಗಳು:**

- ಶ್ರವಣದೋಷವುಳ್ಳ ಮಕ್ಕಳಿಗಾಗಿ ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಜಿಲ್ಲೆಗಳಲ್ಲಿ 4 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ಇಲಾಖಾವತಿಯಿಂದ ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ. ಇತ್ತೀಚೆಗೆ ಬೆಂಗಳೂರಿನಲ್ಲಿ ಶ್ರವಣದೋಷವುಳ್ಳ ಮಕ್ಕಳ ಶಾಲೆಯನ್ನು ಸರ್ಕಾರದಿಂದ ನಡೆಸಲಾಗುತ್ತಿದೆ.

**2. ಅಂಧ ಮಕ್ಕಳಿಗಾಗಿ ಸರ್ಕಾರದ ವಸತಿಯುತ ಶಾಲೆಗಳು:**

ಅಂಧ ಮಕ್ಕಳಿಗಾಗಿ ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

**3. 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:**

1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ. ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

**4. ವಿಕಲಚೇತನರಿಗೆ ವೃತ್ತಿ ತರಬೇತಿ ಕೇಂದ್ರಗಳು:**

ಈ ಯೋಜನೆಯಡಿ ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುವುದಾಗಿದೆ. 1982ರ ರಾಜ್ಯ ಅನುದಾನ ಸಂಹಿತೆಯಡಿ 5 ವೃತ್ತಿ ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನದಡಿ ಬೆಂಗಳೂರಿನಲ್ಲಿ 03 ಮತ್ತು ಮೈಸೂರಿನಲ್ಲಿ 02 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದು ವಾಕ್ ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವೃತ್ತಿ ತರಬೇತಿ ಕೇಂದ್ರಗಳಲ್ಲಿ ವಿವಿಧ ರೀತಿಯ ವಿಕಲಚೇತನರಿಗೆ ಫಿಟ್ಟರ್, ಟರ್ನರ್, ಸರಳ ಇಂಜಿನಿಯರಿಂಗ್, ಬೆತ್ತ, ಹಗ್ಗ, ಚಾಪೆ ಹೆಣೆಯುವುದು ಹಾಗೂ ಪ್ಲಾಸ್ಟಿಕ್ ಮೌಲ್ಡಿಂಗ್ ತರಬೇತಿಯನ್ನು ನೀಡಲಾಗುತ್ತಿದೆ.ಪ್ರತಿ ತರಬೇತಿ ಕೇಂದ್ರದಲ್ಲಿ ವಾರ್ಷಿಕ 25 ಫಲಾನುಭವಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

**5. ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ ನಡೆಯುತ್ತಿರುವ ವಿಶೇಷ ಶಾಲೆಗಳು:**

ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 141 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6200/– ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.5200/– ರಂತೆ ಹಾಗೂ ಬುದ್ಧಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6800/– ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 6000/– ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ.ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

**6.** ಕೇಂದ್ರ ಸರ್ಕಾರದ ದೀನ್‌ದಯಾಳ್ ಪುನರ್ವಸತಿ ಯೋಜನೆಯಡಿ 8 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆ /ವೃತ್ತಿ ತರಬೇತಿ ಕೇಂದ್ರಗಳು ನಡೆಯುತ್ತಿದ್ದು, ಸದರಿ ಶಾಲೆ ಹಾಗೂ ತರಬೇತಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.90ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.

**7. <u>ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹಧನ:</u>**

ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಮಂಜೂರು ಮಾಡಲಾಗುತ್ತಿದೆ. 2001–02ನೇ ಸಾಲಿನಿಂದ ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ.

**<u>8. ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:</u>**

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ.ಈ ಯೋಜನೆಯನ್ನು 2001–02ನೇ ಸಾಲಿನಿಂದ ಬಿ.ಎಡ್, ಎಂ.ಎಡ್. ಮತ್ತು ಟಿ.ಸಿ.ಹೆಚ್. ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ.

**<u>9. ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:</u>**

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು 2013–14ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ

**10. ಬ್ರೈಲ್ ಮುದ್ರಣಾಲಯ:**

ರಾಜ್ಯಾದ್ಯಂತ ವಿಶೇಷ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ದೃಷ್ಟಿದೋಷವುಳ್ಳ ಮಕ್ಕಳಿಗೆ ಬ್ರೈಲ್ ಪುಸ್ತಕಗಳನ್ನು ಉಚಿತವಾಗಿ ನೀಡಲು ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದಲ್ಲಿ ಮುದ್ರಿಸಿ ಸರಬರಾಜು ಮಾಡಲಾಗುತ್ತಿದೆ.

11. **ವಿಶೇಷ ಶಿಕ್ಷಣ ತರಬೇತಿ ಕೇಂದ್ರ ಯೋಜನೆ:**

ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು ತಲಾ ಒಂದರಂತೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ನಡೆಸುತ್ತಿದ್ದು, ಪ್ರತಿ ವರ್ಷ ಪ್ರತಿ ಕೇಂದ್ರದಲ್ಲಿ 25 ಪ್ರಶಿಕ್ಷಣಾರ್ಥಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

**12. ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು:** ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ.10,000/–ಗಳಂತೆ ವಾರ್ಷಿಕ 25.00 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

**(ಬಿ) ಉದ್ಯೋಗ ಮತ್ತು ತರಬೇತಿ:**

**1. ಅಂಗವಿಕಲ ಪುರುಷ ಹಾಗೂ ಮಹಿಳೆಯರ ವಸತಿನಿಲಯ:**

ಬೆಂಗಳೂರಿನಲ್ಲಿ ವಿಕಲಚೇತನ ಮಹಿಳೆ ಮತ್ತು ವಿಕಲಚೇತನ ಪುರುಷರಿಗಾಗಿ ಅಂಗವಿಕಲ ಉದ್ಯೋಗಸ್ಥ ನೌಕರರು ಮತ್ತು ಪ್ರಶಿಕ್ಷಣಾರ್ಥಿಗಳಿಗಾಗಿ ಮಹಿಳೆಯರು ಹಾಗೂ ಪುರುಷರಿಗಾಗಿ ಪ್ರತ್ಯೇಕವಾದ ವಸತಿ ನಿಲಯವನ್ನು ನಡೆಸಲಾಗುತ್ತಿದೆ. ಪ್ರಸ್ತುತ ಈ ಎರಡೂ ವಸತಿ ನಿಲಯಗಳು ಬೆಂಗಳೂರಿನ ಕೆಂಗೇರಿಯಲ್ಲಿ ನಡೆಯುತ್ತಿವೆ. ಪ್ರತಿ ವಸತಿ ನಿಲಯದಲ್ಲಿ 50 ನಿವಾಸಿಗಳನ್ನು ದಾಖಲಿಸಲು ಅವಕಾಶವಿರುತ್ತದೆ.

**2. ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ವಸತಿ ನಿಲಯಗಳು:**

ಅಂಗವಿಕಲ ಉದ್ಯೋಗಸ್ಥ ಮಹಿಳೆಯರಿಗಾಗಿ ಹಾಗೂ ವಿದ್ಯಾರ್ಥಿನಿ/ತರಬೇತಿದಾರರಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 25 ಜಿಲ್ಲೆಗಳಲ್ಲಿ ಮಹಿಳಾ ವಸತಿ ನಿಲಯಗಳು (ಬೆಂಗಳೂರು ನಗರ ಜಿಲ್ಲೆಯಲ್ಲಿ 4 ವಸತಿ ನಿಲಯಗಳು) ನಡೆಯುತ್ತಿವೆ. ಸದರಿ ವಸತಿ ನಿಲಯದಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಹಾಗೂ ತರಬೇತಿದಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಿದ್ದು, ವಿದ್ಯಾರ್ಥಿನಿಯರು ಹಾಗೂ ತರಬೇತಿದಾರರಿಗೆ ಮಾತ್ರ ಉಚಿತ ಊಟದ ವ್ಯವಸ್ಥೆ ಇರುತ್ತದೆ.

**3. ಗ್ರಾಮೀಣ ಪುನರ್ವಸತಿ ಯೋಜನೆ:**

ಈ ಯೋಜನೆಯನ್ನು ರಾಜ್ಯದ ಎಲ್ಲಾ 30 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನ ಗೊಳಿಸಲಾಗುತ್ತಿದೆ. ಪ್ರತಿ ಗ್ರಾಮ ಪಂಚಾಯತಿ ಅಡಿಯಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ ಸಮರ್ಥ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸ್ಥಳೀಯ ಪದವೀಧರ ವಿಕಲಚೇತನರೊಬ್ಬರನ್ನು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರೆಂದು, ಸ್ಥಳೀಯ ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರೆಂದು ಮತ್ತು ನಿರ್ದೇಶನಾಲಯದಲ್ಲಿ ರಾಜ್ಯ ಸಂಯೋಜಕರನ್ನು ಗೌರವಧನ ಆಧಾರದ ಮೇಲೆ ನೇಮಕಾತಿ

ಮಾಡಿಕೊಳ್ಳಲಾಗಿದೆ. ಈ ಕಾರ್ಯಕರ್ತರ ಮೂಲಕ ವಿಕಲಚೇತನರಿಗೆ ಎಲ್ಲಾ ಸೇವಾ ಸೌಲಭ್ಯಗಳನ್ನು ಅವರಿರುವ ಸ್ಥಳಗಳಲ್ಲಿಯೇ ವಿಕಲಚೇತನರ ಮೂಲಕವೇ ತಲುಪಿಸಲಾಗುವುದು.

ಪ್ರಸ್ತುತ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ಪುನರ್ವಸತಿ ಕಾರ್ಯಕರ್ತರುಗಳಿಗೆ ಮಾಹೆಯಾನ ರೂ.6000/– ಗೌರವಧನವನ್ನು ಹಾಗೂ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರುಗಳಿಗೆ ಮಾಹೆಯಾನ ರೂ.12,000/–ಗಳ ಗೌರವಧನವನ್ನು ನೀಡಲಾಗುತ್ತಿದೆ.

<u>**ಮರಣ ಪರಿಹಾರ ನಿಧಿ ಯೋಜನೆ:**</u> ಪ್ರಸ್ತುತ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತರು ನಿಧನ ಹೊಂದಿದ್ದಲ್ಲಿ ರೂ.50,000/–ಗಳ ಪರಿಹಾರ ಧನ ನೀಡಲು ಅವಕಾಶವಿರುತ್ತದೆ.

## ಸಿ. ಆರ್ಥಿಕ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳು:

### 1. ಸಮಾಜ ಸೇವಾ ಸಂಕೀರ್ಣ:

ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ. ಪ್ರಸ್ತುತ ಸಂಸ್ಥೆಯಲ್ಲಿ 80 ನಿವಾಸಿಗಳು ದಾಖಲಾಗಿರುತ್ತಾರೆ.

### 2. ಮಂದಮತಿ ಮಹಿಳೆಯರ ಅನುಪಾಲನಾ ಗೃಹ:

18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದೆ. ಪ್ರಸ್ತುತ ಬೆಂಗಳೂರು ಅನುಪಾಲನಾ ಕೇಂದ್ರದಲ್ಲಿ 100 ಮಂದಿ ಹಾಗೂ ಹುಬ್ಬಳ್ಳಿ ಅನುಪಾಲನ ಕೇಂದ್ರದಲ್ಲಿ 70 ನಿವಾಸಿಗಳು ದಾಖಲಾಗಿರುತ್ತಾರೆ.

### 3. ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು:

ಮಾನಸಿಕ ಅಸ್ವಸ್ಥರಿಗಾಗಿ ಮಾನಸ ಕೇಂದ್ರಗಳನ್ನು ಬೆಂಗಳೂರು ನಗರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿದ್ದು, ರಾಜ್ಯ ಉಚ್ಛ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ(ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ.

### 4. ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:

ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ:ತಾಯಿ: ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ

ನಿರ್ವಹಣೆಗಾಗಿ ರೂ.20,000/-ಗಳ ಪರಿಹಾರ ಧನವನ್ನು ಕುಟುಂಬದ ನಾಮ ನಿರ್ದೇಶಿತ ಸದಸ್ಯರಿಗೆ ಪಾವತಿಸಲಾಗುತ್ತಿದೆ.

**5. ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:**

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು ಮದುವೆಯಾದ ಸಾಮಾನ್ಯ ವ್ಯಕ್ತಿ ಹಾಗೂ ವಿಕಲಚೇತನರ ಜಂಟಿ ಹೆಸರಿನಲ್ಲಿ 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಿ ಪ್ರೋತ್ಸಾಹ ನೀಡಲು ಹಾಗೂ ಅದರಿಂದ ಬರುವ ಬಡ್ಡಿ ಹಣವನ್ನು ಉಪಯೋಗಿಸುವುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಅವಕಾಶವಿರುತ್ತದೆ.

**6. ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :**

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ.ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಠಿಕ ಆಹಾರ, ಔಷಧೋಪಚಾರಗಳಿಗೆ ಮಾಹೆಯಾನ ರೂ.2000/-ದಂತೆ **5 ವರ್ಷಗಳ** ಅವಧಿಗೆ ಸಹಾಯಧನವನ್ನು ನೀಡಲಾಗುತ್ತಿದೆ.ಈ ಸೌಲಭ್ಯವನ್ನು ಕನಿಷ್ಠ 2 ಮಕ್ಕಳವರೆಗೆ ಪಡೆಯಬಹುದಾಗಿದೆ.

**7. ನಿರುದ್ಯೋಗ ಭತ್ಯೆ:-** ಎಸ್.ಎಸ್.ಎಲ್.ಸಿ ಹಾಗೂ ನಂತರ ವ್ಯಾಸಂಗ ಮಾಡಿರುವ ನಿರುದ್ಯೋಗಿ ವಿಕಲಚೇತನರಿಗೆ ಮಾಸಿಕ ರೂ.1000/-ಗಳ ನಿರುದ್ಯೋಗ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ.

**8. ನಾಲ್ಕು ವರ್ಷದೊಳಗಿನ ಶ್ರವಣ ದೋಷವುಳ್ಳ ಮಕ್ಕಳು ಹಾಗೂ ಅವರ ತಾಯಂದಿರ ಸಹಿತ ವಾಕ್ ತರಬೇತಿ ಕೇಂದ್ರ:**

ಹುಟ್ಟಿನಿಂದ ಕಿವುಡರಾದ ಮಕ್ಕಳನ್ನು ಪ್ರಾರಂಭದಲ್ಲಿ ಗುರುತಿಸಿ ಅವರಿಗೆ ಭಾಷಾ ತರಬೇತಿಯನ್ನು ಆ ಮಕ್ಕಳ ತಾಯಿಯಂದಿರ ಸಹಿತ ನೀಡಿದಲ್ಲಿ ಆ ಮಗುವು ಭಾಷೆ ಕಲಿತು ಸಾಮಾನ್ಯ ಮಗುವಿನಂತೆ ಮಾಡನಾಡಲು ಶಕ್ತವಾಗುವುದು ಎಂಬ ಉದ್ಧೇಶದಿಂದ ಯೋಜನೆಯನ್ನು ಜಾರಿಗೆ ತರಲಾಗಿದೆ. ನಾಲ್ಕು ವರ್ಷದೊಳಗಿನ ಶ್ರವಣ ದೋಷವುಳ್ಳ ಮಕ್ಕಳು ಹಾಗೂ ಅವರ ತಾಯಂದಿರ ಸಹಿತ ವಾಕ್ ತರಬೇತಿ ಕೇಂದ್ರ ವಸತಿರಹಿತ ತರಬೇತಿ ನೀಡಲು ವಿಭಾಗವಾರು 2 ಜಿಲ್ಲೆಗಳಲ್ಲಿ ಒಟ್ಟು 8 ಜಿಲ್ಲೆಗಳಿಗೆ ಜಾರಿಗೊಳಿಸಲಾಗುತ್ತಿದೆ. ಪ್ರಸ್ತುತ ನಾಲ್ಕು ಜಿಲ್ಲೆಗಳಲ್ಲಿ (ಬೆಂಗಳೂರು ನಗರ, ತುಮಕೂರು, ಮೈಸೂರು ಹಾಗೂ ಕಲಬುರ್ಗಿ) ಈ ಯೋಜನೆಯನ್ನು ಪ್ರಾರಂಭಿಸಲಾಗಿದೆ.

**(ಡಿ) ಪುನರ್ವಸತಿ ಯೋಜನೆಗಳು:**

**1. ಅಂಗವಿಕಲರಿಗೆ ಸಾಧನ ಸಲಕರಣೆಗಳು :**

ಈ ಯೋಜನೆಯಡಿಯಲ್ಲಿ ಅಂಗವಿಕಲರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ರೂ.11,500/- ಮತ್ತು ನಗರ ಪ್ರದೇಶದ ಫಲಾನುಭವಿಗಳಿಗೆ ರೂ.24,000/- ನಿಗದಿಗೊಳಿಸಲಾಗಿದೆ. ಈ ಯೋಜನೆಯಡಿ ರೂ.15,000/-ಗಳ ಮಿತಿಯೊಳಗೆ ವಿಕಲಚೇತನರಿಗೆ

ಅವಶ್ಯವಿರುವ ಗಾಲಿ ಕುರ್ಚಿ, ಸಾದಾ ತ್ರಿಚಕ್ರವಾಹನ, ಕ್ಯಾಲಿಪರ್ಸ್, ಕ್ರಚಸ್, ಶ್ರವಣ ಸಾಧನ, ವೈಟ್ ಕೇನ್, ಬ್ರೈಲ್ ವಾಚ್ ಇನ್ನಿತರ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

2. **ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :**

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

**3. ತೀವ್ರತರಹ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ :**

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರಿಗೆ ಓಡಾಡಲು ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಮಂಜೂರು ಮಾಡಲಾಗುತ್ತದೆ. ಈ ಯೋಜನೆಯಡಿ ಫಲಾನುಭವಿಯ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರಬೇಕಾಗಿರುತ್ತದೆ.

**4. ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ:-**

ವಿಕಲಚೇತನರನ್ನು ಗುರುತಿಸಿ ಅವರಿಗೆ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿ ಸೇವೆಗಳನ್ನು ಅವರ ಮನೆ ಬಾಗಿಲಿನಲ್ಲಿಯೇ ಒದಗಿಸಿ ಅವರ ಸರ್ವಾಂಗೀಣ ಪುನರ್ವಸತಿಯನ್ನು ಕಲ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಈ ಯೋಜನೆಯಡಿ ವಿಕಲಚೇತನರಿಗೆ ಅಗತ್ಯವಿರುವ ವೈದ್ಯಕೀಯ ಸೇವೆ, ವೃತ್ತಿ ಚಿಕಿತ್ಸೆ, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ಕೇಂದ್ರಗಳಲ್ಲಿ ತಯಾರಿಸಿ ಒದಗಿಸಲಾಗುವುದು. ಪ್ರಸ್ತುತ 16 ಜಿಲ್ಲೆಗಳಲ್ಲಿ ಜಿಲ್ಲಾ ಪುನರ್ವಸತಿ ಕೇಂದ್ರಗಳು ನಡೆಯುತ್ತಿವೆ. (ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಬೀದರ್, ಚಿತ್ರದುರ್ಗ, ದಕ್ಷಿಣ ಕನ್ನಡ, ಮೈಸೂರು, ಉಡುಪಿ, ಹಾಸನ, ವಿಜಯಪುರ, ರಾಯಚೂರು, ಚಿಕ್ಕಮಗಳೂರು, ಬಳ್ಳಾರಿ, ಹಾವೇರಿ, ಚಾಮರಾಜನಗರ, ಗದಗ)

5. **ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-**

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಂಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

**6. ಅಂಧ ವಿದ್ಯಾರ್ಥಿಗಳೀಗೆ ಬ್ರೈಲ್ ಕಿಟ್‌ಗಳ ವಿತರಿಸುವ ಯೋಜನೆ:-**

ಅಂಧ ವಿದ್ಯಾರ್ಥಿಗಳು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ಸ್ವಾವಲಂಬಿಗಳಾಗಲು ರಾಜ್ಯದ ಅಂಧ ವಿದ್ಯಾರ್ಥಿಗಳಿಗೆ ಟಾಂಕಿಗ್ ಮೊಬೈಲ್, ಬ್ರೈಲ್ ವಾಚ್, ವಾಕಿಂಗ್ ಸ್ಟಿಕ್ ಮತ್ತು ಇನ್ನಿತರ ಸಾಧನೆಗಳನ್ನು ಒಳಗೊಂಡ ತಲಾ ರೂ.25000/-ಗಳ ಕಿಟ್‌ಗಳನ್ನು ವಿತರಿಸಲಾಗುತ್ತಿದೆ.

## 7. ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರವನ್ನು ವಿತರಿಸುವ ಯೋಜನೆ:–

ಶ್ರವಣದೋಷವುಳ್ಳವರು ಉದ್ಯೋಗಾವಕಾಶದಿಂದ ವಂಚಿತರಾಗುತ್ತಿರುವುದನ್ನು ಮನಗಂಡು ಅವರು ಸ್ವಯಂ ಉದ್ಯೋಗ ಕೈಗೊಂಡು ಸ್ವಾವಲಂಬಿಗಳಾಗಲು ಅನುವಾಗುವಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರವನ್ನು ವಿತರಿಸಲಾಗುತ್ತಿದೆ.

### (ಇ). ಸಾಧನೆ ಮತ್ತು ಪ್ರತಿಭೆ ಯೋಜನೆ:

ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/–ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ವೈಯಕ್ತಿಕ ಸಾಂಸ್ಕೃತಿಕ ರೂ.2,000/–ಗಳು ಹಾಗೂ ಸಮೂಹ ಕಾರ್ಯಕ್ರಮಕ್ಕೆ ರೂ.10,000/–ಗಳ ಪ್ರೋತ್ಸಾಹಧನ ನೀಡಲಾಗುತ್ತದೆ.

### (ಎಫ್). ನಿರಾಮಯ ಆರೋಗ್ಯ ವಿಮಾ ಯೋಜನೆ :

ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿ ಹಾಗೂ ಮಗುವಿಗೆ ವರ್ಷಕ್ಕೆ ಒಂದು ಬಾರಿ ಪ್ರೀಮಿಯಂ ಮೊತ್ತ ರೂ.250/–ಗಳನ್ನು ಭಾರತ ಸರ್ಕಾರದಿಂದ ಗುರುತಿಸಲ್ಪಟ್ಟ ಅಧಿಕೃತ ಸಂಸ್ಥೆಯಾದ ಅಂಗವಿಕಲರ ಮನಶ್ಚೇತನ ಸಂಸ್ಥೆ (ರಿ) (ಎ.ಪಿ.ಡಿ) ಬೆಂಗಳೂರು ರವರಿಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತದಲ್ಲಿ ರೂ.60,000/–ಗಳವರೆಗೆ ಸರ್ಜರಿ ವೆಚ್ಚ ಉಳಿದ ರೂ.40,000/–ಗಳಲ್ಲಿ ವೈದ್ಯಕೀಯ ಖರ್ಚು ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ.

### (ಜಿ). ಸ್ಪರ್ಧಾ ಚೇತನ ಯೋಜನೆ:–

ಈ ಯೋಜನೆಯಡಿ ವಿಶೇಷ ಸಾಮರ್ಥ್ಯ/ಭಿನ್ನ ಸಾಮರ್ಥ್ಯದ ವಿದ್ಯಾವಂತ ವ್ಯಕ್ತಿಗೆಗಳಿಗೆ ಐ.ಎ.ಎಸ್./ಕೆ.ಎ.ಎಸ್. ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪೂರ್ವ ಪರೀಕ್ಷಾ ತರಬೇತಿ ಕೇಂದ್ರಗಳು ಹಾಗೂ ಈ ಇಲಾಖೆಯಿಂದ ಗುರುತಿಸಲ್ಪಟ್ಟ ತರಬೇತಿ ಕೇಂದ್ರಗಳ ಮೂಲಕ ತರಬೇತಿಯನ್ನು ಉಚಿತವಾಗಿ ನೀಡಲಾಗುತ್ತಿದೆ.

**(ಹೆಚ್). ವಿಕಲಚೇತನರಿಗೆ ವಿಶಿಷ್ಟ ಗುರುತಿನ ಚೀಟಿ (UNIQUE DISABILITY ID)**ನೀಡುವಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ.

## ಹಿರಿಯ ನಾಗರಿಕರಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳು

### ಹಗಲು ಯೋಗಕ್ಷೇಮ ಕೇಂದ್ರಗಳು:

ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, ಪ್ರತಿ ಕೇಂದ್ರದಲ್ಲಿ ಸುಮಾರು 50–150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ.

### 1. ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 28 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

### 2. ಹಿರಿಯ ನಾಗರಿಕರ ವೃದ್ಧಾಶ್ರಮ:

ರಾಜ್ಯದ 30 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್, ಮೂಲಕ ಮಂಜೂರು ಮಾಡಲಾಗುತ್ತಿದೆ.

ರಾಜ್ಯದ ಪ್ರತಿ ಕಂದಾಯ ಉಪ ವಿಭಾಗದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವೃದ್ಧಾಶ್ರಮಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಪ್ರಸ್ತುತ 8 ಕಂದಾಯ ಉಪ ವಿಭಾಗಕ್ಕೆ ವೃದ್ಧಾಶ್ರಮ ನಡೆಸಲು ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ.

### 3. ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು:

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರ ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.

# ಮಕ್ಕಳ ರಕ್ಷಣಾ ನಿರ್ದೇಶನಾಲಯ

ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ರಾಜ್ಯದಲ್ಲಿ ನಿರ್ಲಕ್ಷ್ಯತೆಗೊಳಗಾದ ಪರಿತ್ಯಜಿಸಲ್ಪಟ್ಟ, ಕುಟುಂಬದಿಂದ ಬೇರ್ಪಟ್ಟ, ಬಾಲಕಾರ್ಮಿಕತೆ, ಬಾಲ್ಯವಿವಾಹ, ಪೋಕ್ಸೋ ಹಾಗೂ ಇನ್ನಿತರೆ ದೌರ್ಜನ್ಯ ಮತ್ತು ಶೋಷಣೆಗೊಳಗಾದ ಮಕ್ಕಳ ಪಾಲನೆ, ರಕ್ಷಣೆ ಮತ್ತು ಪುನರ್ವಸತಿಗಾಗಿ ಕೇಂದ್ರ ಸರ್ಕಾರದ ಮಿಷನ್ ವಾತ್ಸಲ್ಯ ಯೋಜನೆಯಡಿ ಜಾರಿಯಾಗುತ್ತಿರುವ ಎಲ್ಲಾ ಯೋಜನೆಗಳನ್ನು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ)ಕಾಯ್ದೆ, 2015, ತಿದ್ದುಪಡಿ, 2021 ಹಾಗೂ ಮಾದರಿ ನಿಯಮಗಳು, 2016, ತಿದ್ದುಪಡಿ ಮಾದರಿ ನಿಯಮಗಳು, 2022 ಅನ್ನು ಅನುಷ್ಠಾನಗೊಳಿಸಲಾಗುತ್ತಿದೆ.

**1. <u>ಮಕ್ಕಳ ಕಲ್ಯಾಣ ಸಮಿತಿ</u> :**

ಬಾಲನ್ಯಾಯ ಕಾಯ್ದೆ ಮತ್ತು ಮಾದರಿ ನಿಯಮಗಳನ್ವಯ ಸಮಾಜದಲ್ಲಿ ಪಾಲನೆ ಮತ್ತು ರಕ್ಷಣೆ ಅಗತ್ಯವಿರುವ ಮಕ್ಕಳ ಪುನರ್ವಸತಿಗಾಗಿ ಸೂಕ್ತ ಕ್ರಮಕ್ಕಾಗಿ ಎಲ್ಲಾ ಜಿಲ್ಲೆಗಳಲ್ಲಿ ಅಗತ್ಯತೆಗೆ ಅನುಗುಣವಾಗಿ ಮಕ್ಕಳ ಕಲ್ಯಾಣ ಸಮಿತಿಗಳನ್ನು ರಚಿಸಲಾಗಿರುತ್ತದೆ.

**2. <u>ಬಾಲ ನ್ಯಾಯ ಮಂಡಳಿ:</u>**

ಕಾನೂನಿನೊಂದಿಗೆ ಸಂಘರ್ಷಕ್ಕೊಳಗಾದ ಮಕ್ಕಳಿಗೆ ಸಂಬಂಧಿಸಿದ ಪ್ರಕರಣಗಳನ್ನು ನಿರ್ವಹಿಸಲು ಹಾಗೂ ಸದರಿ ಮಕ್ಕಳ ಪುನರ್ವಸತಿಗೆ ಕ್ರಮವಹಿಸಲು ಬಾಲನ್ಯಾಯ ಕಾಯ್ದೆ ಮತ್ತು ಮಾದರಿ ನಿಯಮಗಳನ್ವಯ ಎಲ್ಲಾ ಜಿಲ್ಲೆಗಳಲ್ಲಿ ಬಾಲನ್ಯಾಯ ಮಂಡಳಿಗಳನ್ನು ರಚಿಸಲಾಗಿರುತ್ತದೆ.

**3. <u>ಉಚಿತ ಮಕ್ಕಳ ಸಹಾಯವಾಣಿ ಸಂಖ್ಯೆ–112</u>**

ಇದು ರಾಷ್ಟ್ರ ವ್ಯಾಪ್ತಿಯಲ್ಲಿ ಚಾಲ್ತಿಯಲ್ಲಿರುವ ಮಕ್ಕಳ ಸಹಾಯವಾಣಿ ಸಂಖ್ಯೆಯಾಗಿದ್ದು, ಪ್ರಸ್ತುತ, ಕೇಂದ್ರ ಸರ್ಕಾರವು ಸಮಗ್ರ ರಾಜ್ಯ ಮಕ್ಕಳ ರಕ್ಷಣಾ ಸೊಸೈಟಿಯ ಬದಲಾಗಿ 2022–23ನೇ ಸಾಲಿನಿಂದ **ಮಿಷನ್ ವಾತ್ಸಲ್ಯ** ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ. ಈ ಯೋಜನೆಯ ಮಾರ್ಗಸೂಚಿಯನ್ವಯ ಮಕ್ಕಳ (CHL–1098) ಸಹಾಯವಾಣಿಗಳನ್ನು ತುರ್ತು ಕರೆERSS-112ರೊಂದಿಗೆ ಏಕೀಕರಿಸಲು C-DAC ಸಹಯೋಗದೊಂದಿಗೆ ನಿರ್ವಹಣಾ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.

ಈ ಮಕ್ಕಳ ಸಹಾಯವಾಣಿ ನಿರ್ವಹಣೆಯನ್ನು ರಾಜ್ಯದ ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳಿಗೆ ಹಸ್ತಾಂತರಿಸಿ ನಿರ್ವಹಣೆ ಮಾಡುವ ಪರಿವರ್ತನಾ ಪ್ರಕಿಯೆಯನ್ನು ಕೇಂದ್ರ ಸರ್ಕಾರವು ಕೈಗೊಂಡಿದೆ.

**4. <u>ಬಾಲಕರ ಮತ್ತು ಬಾಲಕಿಯರ ಬಾಲಮಂದಿರ</u>**

ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಬಂದ ಮಕ್ಕಳ ಪ್ರಕರಣಗಳ ವಿಚಾರಣೆ ವೇಳೆ ರಕ್ಷಣೆ ಮತ್ತು ಪೋಷಣೆ ಅಗತ್ಯವಿರುವ ಮಕ್ಕಳ ಪಾಲನೆ ಮತ್ತು ರಕ್ಷಣೆಗಾಗಿ ಹಾಗೂ ದೀರ್ಘಾವಧಿ ಪುನರ್ವಸತಿಗಾಗಿ, ಬಾಲಕರ ಮತ್ತು ಬಾಲಕಿಯರಿಗಾಗಿ ಪ್ರತ್ಯೇಕ ಬಾಲಮಂದಿರಗಳನ್ನು ಸ್ಥಾಪಿಸಲಾಗಿದೆ.

**5. <u>ವೀಕ್ಷಣಾಲಯಗಳು:</u>**

ಕಾನೂನಿನೊಡನೆ ಸಂಘರ್ಷಕ್ಕೊಳಪಟ್ಟ 18 ವರ್ಷದೊಳಗಿನ ಮಕ್ಕಳ ವಿರುದ್ಧ ದಾಖಲಾದ ಪ್ರಕರಣದ ವಿಚಾರಣೆ ಬಾಕಿಯಿರುವ ಅವಧಿಯಲ್ಲಿ ತಾತ್ಕಾಲಿಕವಾಗಿ ಅಭಿರಕ್ಷಣೆ ಒದಗಿಸುವ ಕೇಂದ್ರವಾಗಿರುತ್ತವೆ. ಈ ಕೇಂದ್ರಗಳನ್ನು ಬಾಲ ನ್ಯಾಯ (ಮಕ್ಕಳ ಪಾಲನೆ ಮತ್ತುರಕ್ಷಣೆ) ಕಾಯ್ದೆ ಹಾಗೂ ಮಾದರಿ ನಿಯಮಗಳ ಅನ್ವಯ ಜಿಲ್ಲೆಗಳಲ್ಲಿ ಅಗತ್ಯತೆಗೆ ಅನುಗುಣವಾಗಿ ಸ್ಥಾಪಿಸಲಾಗಿರುತ್ತದೆ.

**6. ಅನುಪಾಲನಾ ಗೃಹಗಳು: (After care)**

18 ವರ್ಷ ಪೂರ್ಣಗೊಂಡ ನಂತರ ಮಕ್ಕಳ ಪಾಲನಾ ಸಂಸ್ಥೆಗಳಿಂದ ಬಿಡುಗಡೆಯಾದ ಮಕ್ಕಳಿಗೆ 21 ವರ್ಷ ತುಂಬುವವರೆಗೆ ಅಥವಾ ವಿಶೇಷ ಸಂದರ್ಭಗಳಲ್ಲಿ ಹೆಚ್ಚುವರಿಯಾಗಿ 2 ವರ್ಷದವರೆಗೆ ಅನುಪಾಲನಾ ಗೃಹಗಳಲ್ಲಿ ವಾಸ್ತವ್ಯ ಕಲ್ಪಿಸಿ ವಿದ್ಯಾಭ್ಯಾಸ, ಉದ್ಯೋಗಾಧಾರಿತ ತರಬೇತಿ, ಕೌಶಲ್ಯಾಭಿವೃದ್ಧಿ ಹಾಗೂ ಇನ್ನಿತರೆ ಸೌಲಭ್ಯಗಳನ್ನು ನೀಡುವ ಮೂಲಕ ಸದರಿ ಮಕ್ಕಳನ್ನು ಸಮಾಜದ ಮುಖ್ಯವಾಹಿನಿಗೆ ತರಲು ಪುನರ್ವಸತಿ ಕಲ್ಪಿಸಲಾಗುವುದು.

ಪ್ರಸ್ತುತ ರಾಜ್ಯದಲ್ಲಿ ಗಂಡು ಮಕ್ಕಳಿಗಾಗಿ ಸರ್ಕಾರದಿಂದ ಒಂದು ಅನುಪಾಲನಾ ಗೃಹ ಮತ್ತು ಬಾಲಕಿಯರಿಗಾಗಿ ನಾಲ್ಕು ಕಂದಾಯ ವಿಭಾಗಗಳಿಗೆ ಒಂದರಂತೆ ಹಾಗೂ ಹೆಚ್ಚುವರಿಯಾಗಿ ತುಮಕೂರು ಮತ್ತು ಬೆಂಗಳೂರು ಜಿಲ್ಲೆ ಸೇರಿ ಒಟ್ಟು 6 ಅನುಪಾಲನಾ ಗೃಹಗಳನ್ನು ಸ್ವಯಂ ಸೇವಾ ಸಂಸ್ಥೆಯ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ.

**7. ದತ್ತು ಕಾರ್ಯಕ್ರಮ:**

ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಪ್ರತಿ ಮಗುವಿನ ಹಕ್ಕು. ಮಗುವಿಗೆ ಅಗತ್ಯ ಪ್ರೀತಿ ಮತ್ತು ಆರೈಕೆ ಕುಟುಂಬದ ವಾತಾವರಣವು ಕಲ್ಪಿಸಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ದತ್ತು ಪ್ರಕ್ರಿಯೆಯು ಅನಾಥ, ಪರಿತ್ಯಕ್ತ ಹಾಗೂ ನಿರ್ಗತಿಕ ಮಕ್ಕಳ ಪುನರ್ವಸತಿಗೆ ನೆರವಾಗುತ್ತದೆ. ಇಂತಹ ಮಕ್ಕಳಿಗೆ ದತ್ತು ಪೋಷಕರನ್ನು ಒದಗಿಸಿಕೊಡುವುದರ ಮೂಲಕ ಶಾಶ್ವತ ಕುಟುಂಬ ವ್ಯವಸ್ಥೆಯನ್ನು ಕಾನೂನುಬದ್ಧವಾಗಿ ಕಲ್ಪಿಸಲು ದತ್ತು ಕಾರ್ಯಕ್ರಮ ನೆರವಾಗುತ್ತಿದೆ.

**8. ತೆರೆದ ತಂಗುದಾಣಗಳು:**

ನಗರ ಮತ್ತು ಅರೆ ನಗರ ಪ್ರದೇಶಗಳಲ್ಲಿ ಭಿಕ್ಷಾಟನೆಯಲ್ಲಿ ತೊಡಗಿರುವ ಚಿಂದಿ ಆಯುವ, ಬೀದಿ–ಬದಿ ಕೆಲಸ ಮಾಡುವ, ಶೋಷಣೆ, ವಲಸೆ ಬಂದವರ ಮಕ್ಕಳು ಮತ್ತು ರಸ್ತೆ ಬದಿಯಲ್ಲಿ ವಾಸಿಸುವವರ ಮಕ್ಕಳ ತಾತ್ಕಾಲಿಕ ಪುನರ್ವಸತಿಗಾಗಿ ಈ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ.

**9. ಅರ್ಹ ಸಂಸ್ಥೆ:**

ಈ ಯೋಜನೆಯಡಿ ಸರ್ಕಾರಿ ಸಂಸ್ಥೆ ಅಥವಾ ನೋಂದಾಯಿತ ಸ್ವಯಂ ಸೇವಕ ವ್ಯಕ್ತಿ ಅಥವಾ ಸರ್ಕಾರೇತರ ಸಂಸ್ಥೆಗಳಿಂದ ಒಂದು ನಿರ್ದಿಷ್ಟವಾದ ಉದ್ದೇಶಕ್ಕಾಗಿ ವಿಶೇಷ ಅಗತ್ಯತೆ ಇರುವ ಮಗುವಿನ ಜವಾಬ್ದಾರಿಯನ್ನು ತಾತ್ಕಾಲಿಕವಾಗಿ ನಿರ್ದಿಷ್ಟ ಅವಧಿಯವರೆಗೆ ವಹಿಸಿಕೊಡುವ ಉದ್ದೇಶವನ್ನು ಹೊಂದಿರುತ್ತದೆ.

**10. ಪ್ಲೇಸ್‌ಆಫ್ ಸೇಫ್ಟಿ:**

ಕಾನೂನಿನೊಡನೆ ಸಂಘರ್ಷಕ್ಕೊಳಪಟ್ಟು ಗಂಭೀರ ಪ್ರಕರಣಗಳನ್ನು ಎದುರಿಸುತ್ತಿರುವ 16 ರಿಂದ 18 ವರ್ಷದೊಳಗಿನ ಮಕ್ಕಳ ವಿಚಾರಣಾ ಪ್ರಕ್ರಿಯೆ ಪೂರ್ಣಗೊಳ್ಳುವ ತನಕ ಮತ್ತು ಅಪರಾಧವೆಸಗಿರುವ ಅಪರಾಧಿಗಳಿಗೆ ಪುನರ್ವಸತಿ ಕಲ್ಪಿಸಲು ಈ ಕೇಂದ್ರವನ್ನು ಸ್ಥಾಪಿಸಲಾಗಿರುತ್ತದೆ.

**11. ವಿಶೇಷ ಗೃಹ:**

ಸೆಂಟರ್ ಫಾರ್ ಜುವೆನೈಲ್ ಜಸ್ಟೀಸ್ ಎಂಬ ಸ್ವಯಂಸೇವಾ ಸಂಸ್ಥೆಗೆ ಅರ್ಹ ಸಂಸ್ಥೆಯೆಂದು ಮಾನ್ಯತೆ ನೀಡಿ ಬೆಂಗಳೂರು ನಗರದಲ್ಲಿ ವಿಶೇಷಗೃಹ ನಡೆಸಲು ಅನುಮತಿ ನೀಡಿರುತ್ತದೆ.

ಎಕೋ ಸಂಸ್ಥೆಯು ವಿವಿಧ ಪುನರ್ವಸತಿಯ ಕಾರ್ಯಕ್ರಮಗಳನ್ನು ಮತ್ತು ಮಾರುಕಟ್ಟೆಯಲ್ಲಿ ಪ್ರಚಲಿತವಿರುವ ವೃತ್ತಿಪರ ಚಟುವಟಿಕೆಗಳಲ್ಲಿ ತರಬೇತಿ ನೀಡುವ ಮೂಲಕ ಉದ್ಯೋಗವಕಾಶ ಖಾತರಿಪಡಿಸುತ್ತಿದೆ.

**12. ಬಾಲನ್ಯಾಯ ನಿಧಿ**

ಪೋಕ್ಸೋ ಪ್ರಕರಣಗಳಿಗೆ ಒಳಗಾದ 18 ವರ್ಷದೊಳಗಿನ ಮಕ್ಕಳ ವೈದ್ಯಕೀಯ ವೆಚ್ಚಗಳಿಗೆ ಮತ್ತು ನ್ಯಾಯಾಲಯದಲ್ಲಿ ದಾಖಲಾದ ಸದರಿ ಪ್ರಕರಣಗಳಲ್ಲಿ ಮಕ್ಕಳ ಅಗತ್ಯತೆಗೆ ನೇಮಿಸಿಕೊಳ್ಳುವ ವಿಶೇಷ ತಜ್ಞರು, ಭಾಷಾಂತಕಾರರು, ಸಮಾಲೋಚಕರಿಗೆ ಗೌರವಧನ ಪಾವತಿಸಲಾಗುವುದು. ಅಲ್ಲದೇ ಸರ್ಕಾರ ಹಾಗೂ ಎಲ್ಲಾ ನೋಂದಾಯಿತ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಮಕ್ಕಳ ಕಲ್ಯಾಣ ಸಮಿತಿಯಿಂದ ದಾಖಲಾದ 18 ವರ್ಷದೊಳಗಿನ ಮಕ್ಕಳ ವೈದ್ಯಕೀಯ ಚಿಕಿತ್ಸೆ, ಮುಂದುವರೆದ ವಿದ್ಯಾಭ್ಯಾಸ (ಸಿ.ಇ.ಟಿ ತಾಂತ್ರಿಕ ಹಾಗೂ ತಾಂತ್ರಿಕೇತರ ಹಾಗೂ ಇನ್ನಿತರೆ) ಕ್ರೀಡೆ, ಕೌಶಲ್ಯಾಭಿವೃದ್ಧಿ, ಇನ್ನಿತರೆ ಮುಂತಾದ ಸೌಲಭ್ಯಗಳನ್ನು ಒದಗಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

**13. ಅರಿವು ಮೂಡಿಸುವ ಕಾರ್ಯಕ್ರಮಗಳು**

ಐ.ಇ.ಸಿ ಯೋಜನೆಯಡಿ ಸಾರ್ವಜನಿಕರಿಗೆ, ವಿವಿಧ ಇಲಾಖೆಯ ಅಧಿಕಾರಿ ಸಿಬ್ಬಂದಿಗಳಿಗೆ, ಜಿಲ್ಲಾಧಿಕಾರಿಗಳಿಗೆ ಮತ್ತು ಶಾಲಾ ಮಕ್ಕಳಿಗೆ ಹಲವಾರು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಮಕ್ಕಳಿಗಾಗಿ ವಿವಿಧ ವಿಷಯಗಳ ಬಗ್ಗೆ ಅರಿವು ಮೂಡಿಸಲು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಕಿರುಚಿತ್ರಗಳನ್ನು ನಿರ್ಮಿಸಲಾಗಿರುತ್ತದೆ. ಈ ಕಾರ್ಯಕ್ರಮಗಳನ್ನು ಸಾಮಾಜಿಕ ಜಾಲತಾಣಗಳಲ್ಲಿಯೂ ವೀಕ್ಷಿಸಬಹುದಾಗಿರುತ್ತದೆ.

**14. ವಿಶೇಷ ಪಾಲನಾ ಯೋಜನೆ**

ರಾಜ್ಯ ಸರ್ಕಾರದ ವತಿಯಿಂದ ಈ ಯೋಜನೆಯು ಅನುಷ್ಠಾನಗೊಳ್ಳುತ್ತಿದೆ.

ಹೆಚ್.ಐ.ವಿ./ಏಡ್ಸ್ ಸೋಂಕಿತ/ಬಾಧಿತ ಮಕ್ಕಳ ಹಾಗೂ ಏಡ್ಸ್‌ನಿಂದ ಪಾಲಕರನ್ನು ಕಳೆದುಕೊಂಡ ಮಕ್ಕಳಿಗೆ ಪೌಷ್ಠಿಕ ಆಹಾರ, ಸೂಕ್ತ ವೈದ್ಯಕೀಯ ಚಿಕಿತ್ಸೆ ನೀಡುವುದರೊಂದಿಗೆ ಅವರನ್ನು ಶಿಕ್ಷಣದ ಮುಖ್ಯವಾಹಿನಿಯಲ್ಲಿ ತರುವುದು ಈ ಯೋಜನೆಯ ಉದ್ದೇಶ.

ಯೋಜನೆಯಡಿಯಲ್ಲಿ ಎ.ಆರ್.ಟಿ. ಕೇಂದ್ರಗಳಲ್ಲಿ ನೋಂದಾಯಿತ ಕುಟುಂಬದ ವಿವರಗಳನ್ನು ಪಡೆದು, ಗೃಹ ಅಧ್ಯಯನ ನಡೆಸಿ, ಒಪ್ಪಿಗೆ ಪತ್ರ ಪಡೆದು ಹೆಚ್.ಐ.ವಿ.ಸೋಂಕಿತ / ಬಾದಿತ ಮಕ್ಕಳಿಗೆ ಆರ್ಥಿಕ ಸಹಾಯವನ್ನು ಪ್ರತಿ ಮಗುವಿಗೆ ಪ್ರತಿ ಮಾಹೆಗೆ ರೂ.1000/-ಗಳಂತೆ (ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ) ಒದಗಿಸಲಾಗುತ್ತದೆ. ವೈದ್ಯಕೀಯ, ಪೌಷ್ಠಿಕ ಆಹಾರ, ಶಿಕ್ಷಣ ಮತ್ತು ಇತರೆ ಅವಶ್ಯಕತೆಗಳನ್ನು ಪೂರೈಸಲು ಕುಟುಂಬಗಳಿಗೆ ಪೂರಕವಾಗಿ ಆರ್ಥಿಕ ನೆರವನ್ನು ಮಗುವಿಗೆ 18 ವರ್ಷ ಪೂರ್ಣಗೊಳ್ಳುವವರೆಗೆ ಒದಗಿಸಲಾಗುತ್ತದೆ.

2023-24ನೇ ಸಾಲಿನಲ್ಲಿ ಒಟ್ಟು 12122 ಫಲಾನುಭವಿಗಳು ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿದ್ದು, ಸದರಿ ಫಲಾನುಭವಿಗಳಿಗೆ Direct Benefit Transfer (DBT) ಮುಖಾಂತರ ಅನುದಾನ ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ.

**15. ಮುಖ್ಯ ಮಂತ್ರಿ ಬಾಲಸೇವಾ ಯೋಜನೆ:**

ಕೋವಿಡ್–19ರ ಕಾರಣದಿಂದ ಇಬ್ಬರೂ ಪೋಷಕರನ್ನು ಕಳೆದುಕೊಂಡ ಮಕ್ಕಳಿಗೆ ಈ ಯೋಜನೆಯಡಿಯಲ್ಲಿ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುವುದು. (233 ಫಲಾನುಭವಿಗಳು ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.)

1. ವಿಸ್ತೃತ ಕುಟುಂಬದ ಸದಸ್ಯರ ಆರೈಕೆಯಲ್ಲಿರುವ ಮಕ್ಕಳಿಗೆ ಪ್ರತಿ ತಿಂಗಳು ರೂ.3,500/–ಗಳ ಆರ್ಥಿಕ ಧನ ಸಹಾಯವನ್ನು ಮಗು ಮತ್ತು ಮಗುವಿನ ಕಾನೂನು ಬದ್ಧ ಪೋಷಕರ ಜಂಟಿ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು.

2. ಹತ್ತು ವರ್ಷದೊಳಗಿನ ಮಕ್ಕಳ ಪಾಲನೆಗೆ ವಿಸ್ತೃತ ಕುಟುಂಬದ ಸದಸ್ಯರು ಇಲ್ಲದಿದ್ದಲ್ಲಿ ಅಂತಹ ಮಕ್ಕಳನ್ನು ರಕ್ಷಣೆ ಮತ್ತು ಪಾಲನೆಗಾಗಿ ನೋಂದಾಯಿತ ಮಕ್ಕಳ ಪಾಲನಾ ಸಂಸ್ಥೆಗೆ ದಾಖಲಿಸುವುದು.

3. ರಾಜ್ಯ ಸರ್ಕಾರದ ಸ್ವಾಮ್ಯದ ಮಾದರಿ ವಸತಿ ಶಾಲೆಗಳಲ್ಲಿ ಯಾವ ತರಗತಿಗೆ ಪ್ರವೇಶಕ್ಕೆ ಅವಕಾಶವಿದೆಯೋ ಆ ತರಗತಿಯಿಂದ ಅನ್ವಯವಾಗುವಂತೆ ಪ್ರವೇಶ ಪರೀಕ್ಷೆಗಳಿಲ್ಲದೇ ನೇರವಾಗಿ ಪ್ರವೇಶಾವಕಾಶ ಕಲ್ಪಿಸಿ ಉತ್ತಮ ಗುಣಮಟ್ಟದ ಉಚಿತ ಶಿಕ್ಷಣ ನೀಡುವುದು.

4. ಎಸ್.ಎಸ್.ಎಲ್.ಸಿ ಪೂರೈಸಿದ ಮಕ್ಕಳಿಗೆ ಉನ್ನತ ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿಗಾಗಿ ಲ್ಯಾಪ್‌ಟಾಪ್ ಅಥವಾ ಟ್ಯಾಬ್ ವಿತರಣೆ.

5. ಹೆಣ್ಣು ಮಕ್ಕಳಿಗೆ 21 ವರ್ಷ ತುಂಬಿದ ನಂತರ ವಿವಾಹ, ಉನ್ನತ ಶಿಕ್ಷಣ ಹಾಗೂ ಸ್ವಯಂ ಉದ್ಯೋಗದ ಉದ್ದೇಶಗಳಿಗಾಗಿ ತಲಾ ರೂ. 1.00 ಲಕ್ಷ ಆರ್ಥಿಕ ಧನ ಸಹಾಯ.

## 16. PM Cares for Children ಯೋಜನೆ

ಕೇಂದ್ರ ಸರ್ಕಾರದ PM Cares for Children ಯೋಜನೆಯನ್ನು ಕರ್ನಾಟಕ ರಾಜ್ಯದಲ್ಲಿಯೂ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೋವಿಡ್–19 ರ ಕಾರಣದಿಂದ ಇಬ್ಬರೂ ಪೋಷಕರನ್ನು ಕಳೆದುಕೊಂಡ ಮಕ್ಕಳಿಗೆ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತದೆ. 231 ಫಲಾನುಭವಿಗಳು ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

1. ಅಂಚೆ ಕಛೇರಿಯಲ್ಲಿ ಫಲಾನುಭವಿ ಮತ್ತು ಜಿಲ್ಲಾಧಿಕಾರಿಗಳ ಜಂಟಿ ಖಾತೆಯಲ್ಲಿ ಇಟ್ಟಿರುವ ಇಡಿಗಂಟಿನ ಮೇಲೆ ಲಭ್ಯವಾಗುವ ಬಡ್ಡಿ ಹಣವನ್ನು 18 ವರ್ಷ ಪೂರ್ಣಗೊಂಡ ನಂತರ 23 ವಯಸ್ಸಿನವರೆಗೆ ಸ್ಟೈ– ಫಂಡ್ ರೀತಿಯಲ್ಲಿ ಮಾಸಿಕವಾಗಿ ಒದಗಿಸಲಾಗುವುದು.

2. ಫಲಾನುಭವಿಗಳು 23 ವರ್ಷಕ್ಕೆ ಬಂದಾಗ ಇಡಿಗಂಟಿನ ರೂಪದಲ್ಲಿ(Lump sum amount) ರೂ.10,00,000/–ಗಳ ಆರ್ಥಿಕ ನೆರವನ್ನು ಅವರುಗಳ ಮುಂದಿನ ಭವಿಷ್ಯದ ಉದ್ದೇಶಕ್ಕಾಗಿ ಕಲ್ಪಿಸುವುದು.

3. ಫಲಾನುಭವಿಗಳ ವಿದ್ಯಾಭ್ಯಾಸ ಮತ್ತು ಉನ್ನತ ಶಿಕ್ಷಣಕ್ಕೆ ನೆರವು ಒದಗಿಸುವುದು.

4. ಫಲಾನುಭವಿಗಳಿಗೆ ರೂ.5,00,000/– ಗಳವರೆಗೆ ಉಚಿತ ಆರೋಗ್ಯ ವಿಮೆ ಸೌಲಭ್ಯ ಒದಗಿಸುವುದು.

5. ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದನ್ವಯ PM Cares ನ ಎಲ್ಲಾ ಅನುಮೋದಿತ ಫಲಾನುಭವಿಗಳಿಗೆ ರೂ.50,000/-ಗಳ ಪರಿಹಾರ ಮೊತ್ತವನ್ನು (Ex gratia) ರಾಜ್ಯ ವಿಪತ್ತು ನಿರ್ವಹಣಾ ನಿಧಿಯಿಂದ ಒದಗಿಸಲಾಗಿದೆ.

6. 18 ವರ್ಷದೊಳಗಿನ PM CARESನ ಅನುಮೋದಿತ ಫಲಾನುಭವಿಗಳಿಗೆ ಪ್ರಾಯೋಜಕತ್ವ ಕಾರ್ಯಕ್ರಮದಡಿ ಪ್ರತಿ ಫಲಾನುಭವಿಗೆ ಮಾಹೆಯಾನ ರೂ.4,000/-ಗಳಂತೆ ಅನುದಾನವನ್ನು ಬಿಡುಗಡೆ ಮಾಡಲಾಗುವುದು.

**17. ಪ್ರಾಯೋಜಕತ್ವ ಕಾರ್ಯಕ್ರಮ:**

ಕೇಂದ್ರ ಸರ್ಕಾರದ ಮಿಷನ್ ವಾತ್ಸಲ್ಯ ಮಾರ್ಗಸೂಚಿಯನ್ವಯ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪ್ರತಿಯೊಂದು ಮಗುವು ಕುಟುಂಬದಲ್ಲಿ ಬೆಳೆಯುವುದು ಮಗುವಿನ ಹಕ್ಕು ಎಂಬುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶ.

ಕುಟುಂಬದ ವಾತಾವರಣವನ್ನು ಉತ್ತಮಪಡಿಸುವ ಸಲುವಾಗಿ ಮಕ್ಕಳು ದುಡಿಮೆಗೆ ಹೋಗುವುದನ್ನು ತಪ್ಪಿಸಿ ಶಿಕ್ಷಣವನ್ನು ಮುಂದುವರಿಸುವುದನ್ನು ಉತ್ತೇಜಿಸಲು ಹಾಗೂ ವೈದ್ಯಕೀಯ, ಪೌಷ್ಠಿಕ ಆಹಾರ, ವೃತ್ತಿ ತರಬೇತಿ ಮತ್ತು ಇತರೆ ಅವಶ್ಯಕತೆಗಳನ್ನು ಪೂರೈಸಲು ಕುಟುಂಬಗಳಿಗೆ ಪೂರಕವಾಗಿ ಆರ್ಥಿಕ ನೆರವನ್ನು ಒದಗಿಸಲಾಗುತ್ತದೆ. ತಿಂಗಳಿಗೆ ರೂ.4000/-ಗಳಂತೆ (ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ) ಒಂದು ಕುಟುಂಬದಲ್ಲಿನ ಗರಿಷ್ಠ 2 ಮಕ್ಕಳಿಗೆ ಗರಿಷ್ಠ ಮೂರು ವರ್ಷಗಳ ಅವಧಿಗೆ ಅಥವಾ ಮಗುವಿಗೆ 18 ವರ್ಷ ಪೂರ್ಣಗೊಳ್ಳುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಈ ಸೌಲಭ್ಯವನ್ನು ನೀಡಲು ಕ್ರಮವಹಿಸಲಾಗುತ್ತಿದೆ.

2023-24ನೇ ಸಾಲಿನಲ್ಲಿ ಒಟ್ಟು 8768 ಫಲಾನುಭವಿಗಳು ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿದ್ದು, ಸದರಿ ಫಲಾನುಭವಿಗಳಿಗೆ Direct Benefit Transfer (DBT) ಮುಖಾಂತರ ಅನುದಾನ ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ.

**18. ಉಪಕಾರಯೋಜನೆ**

2020-21ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ಬಾಲನ್ಯಾಯ ಮಕ್ಕಳ ಪಾಲನೆ ಮತ್ತು ರಕ್ಷಣೆ ಕಾಯ್ದೆ-2015ರಡಿ, ಎಲ್ಲಾ ನೋಂದಾಯಿತ ಮಕ್ಕಳ ಪಾಲನಾ ಸಂಸ್ಥೆಗಳಿಂದ ಬಿಡುಗಡೆಯಾದ 18 ವರ್ಷ ವಯಸ್ಸನ್ನು ಮೀರಿದ ಅರ್ಹ ಮಕ್ಕಳಿಗೆ ಅವರು ಆರ್ಥಿಕವಾಗಿ ಸ್ವಾವಲಂಬಿಗಳಾಗುವವರೆಗೆ ಅಥವಾ ಗರಿಷ್ಠ 3 ವರ್ಷಗಳ ಅವಧಿಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಪುನರ್ವಸತಿಗಾಗಿ ಆರ್ಥಿಕ ಸೌಲಭ್ಯ ಒದಗಿಸುವ "ಉಪಕಾರ" ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪ್ರತಿ ಫಲಾನುಭವಿಗೆ ಮಾಹೆಯಾನ ರೂ.5000/-ಗಳ ಆರ್ಥಿಕ ಸೌಲಭ್ಯವನ್ನು ಒದಗಿಸಲಾಗುತ್ತದೆ.

2023-24ನೇ ಸಾಲಿನಲ್ಲಿ ಒಟ್ಟು 207 ಫಲಾನುಭವಿಗಳು ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿದ್ದು, ಸದರಿ ಫಲಾನುಭವಿಗಳಿಗೆ Direct Benefit Transfer (DBT) ಮುಖಾಂತರ ಅನುದಾನ ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ.

**19. ಬಾಲಹಿತೈಷಿ**

ಕೋವಿಡ್–19 ನಿಂದ ಬಾಧಿತ ಮಕ್ಕಳಿಗೆ ನೈತಿಕ, ಭಾವನಾತ್ಮಕ ಹಾಗೂ ಸಾಮಾಜಿಕ ನೆರವನ್ನು ಒದಗಿಸಿ ಮಗುವಿನ ಸರ್ವತೋಮುಖ ಅಭಿವೃದ್ಧಿಗೆ ಬೆಂಬಲ ನೀಡುವ ಸಲುವಾಗಿ ಬಾಲಹಿತೈಷಿ (ಮಾರ್ಗದರ್ಶಕತ್ವ/ಮೆಂಟರ್ಶಿಪ್) ಎಂಬ ಹೊಸ ಯೋಜನೆಯನ್ನು ಪ್ರಾರಂಭಿಸಲಾಗಿದೆ.

ಈ ಯೋಜನೆಯಡಿ ಇಬ್ಬರು ಅಥವಾ ಏಕ ಪೋಷಕರನ್ನು ಕಳೆದುಕೊಂಡಿರುವ ಮಕ್ಕಳನ್ನು ಮಾನಸಿಕ ಆಘಾತದಿಂದ ಹೊರತರಲು ಹಾಗೂ ಆ ಮಕ್ಕಳಿಗೆ ಭಾವನಾತ್ಮಕ, ನೈತಿಕ ಹಾಗೂ ಸಾಮಾಜಿಕ ಬೆಂಬಲವನ್ನು ಒದಗಿಸಲು ಒಬ್ಬ ಮಾರ್ಗದರ್ಶಕರನ್ನು ಮಗುವಿಗೆ ಮಕ್ಕಳ ಕಲ್ಯಾಣ ಸಮಿತಿಯ ಮೂಲಕ ಅನುಸಂಧಾನಿಸುವ ಕಾರ್ಯಕ್ರಮವಾಗಿರುತ್ತದೆ.

ಮಗುವಿನ ನಿರಂತರ ಅನುಸರಣೆಯಿಂದ ಸಾಮಾಜಿಕ ರಕ್ಷಣೆ ಒದಗಿಸದಂತಾಗುತ್ತದೆ. ಈ ಯೋಜನೆಯಡಿ ಮಾರ್ಗದರ್ಶಕರು ಮಗುವಿಗೆ ಆರ್ಥಿಕ ನೆರವನ್ನು ಸಹ ನೀಡಬಹುದಾಗಿರುತ್ತದೆ.

# ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ

**1. ಉದ್ಯೋಗಿನಿ ಯೋಜನೆ:-**

ಮಹಿಳೆಯರು ಆದಾಯ ಉತ್ಪನ್ನಕರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಸ್ವಯಂ ಉದ್ಯೋಗಿಗಳಾಗಲು ಬ್ಯಾಂಕ್ ಮೂಲಕ ಸಾಲ ಮತ್ತು ನಿಗಮದ ಮೂಲಕ ಸಹಾಯಧನವನ್ನು ನೀಡಲಾಗುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಸಾಲದ ಘಟಕ ವೆಚ್ಚ ಕನಿಷ್ಟ ರೂ.1.00 ಲಕ್ಷದಿಂದ ಗರಿಷ್ಟ ರೂ.3.00 ಲಕ್ಷಗಳು, ಸಹಾಯಧನದ ಮೊತ್ತ ಶೇಕಡ 50 ರಷ್ಟು, ಗರಿಷ್ಟ ರೂ.1,50,000/-ಗಳನ್ನು ನೀಡಲಾಗುತ್ತದೆ. ಕುಟುಂಬದ ವಾರ್ಷಿಕ ಆದಾಯದ ಗರಿಷ್ಟ ಮಿತಿ ರೂ.2.00 ಲಕ್ಷಗಳಿಗೆ ಮಿತಿಗೊಳಿಸಿದೆ.

ಸಾಮಾನ್ಯ ವರ್ಗ ಮತ್ತು ವಿಶೇಷ ವರ್ಗದ ಮಹಿಳೆಯರಿಗೆ ಯೋಜನಾ ವೆಚ್ಚ ರೂ.1.00 ಲಕ್ಷದಿಂದ ರೂ.3.00 ಲಕ್ಷಗಳವರೆಗೆ, ಶೇ.30ರಷ್ಟು ಅಥವಾ ಗರಿಷ್ಠ ರೂ.90,000/-ಗಳ ಸಹಾಯಧನ ನೀಡಲಾಗುವುದು. ಸಾಮಾನ್ಯ ವರ್ಗದವರ ಕುಟುಂಬದ ವಾರ್ಷಿಕ ಆದಾಯವನ್ನು ಗರಿಷ್ಠ ರೂ.1.50 ಲಕ್ಷಗಳಿಗೆ ಮಿತಿಗೊಳಿಸಿದೆ. ಎಲ್ಲಾ ವರ್ಗದ ಮಹಿಳೆಯರಿಗೆ ವಯೋಮಿತಿ 18 ವರ್ಷ ಮೇಲ್ಪಟ್ಟು, ಗರಿಷ್ಠ 55 ವರ್ಷದೊಳಗಿರಬೇಕು.

ಫಲಾನುಭವಿಗಳನ್ನು ಆಯಾ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರ ಅಧ್ಯಕ್ಷತೆಯ ಆಯ್ಕೆ ಸಮಿತಿಯಿಂದ ಆಯ್ಕೆ ಮಾಡಲಾಗುತ್ತದೆ.

**2. ಕಿರುಸಾಲ ಯೋಜನೆ:-**

ಈ ಯೋಜನೆಯಡಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸ್ತ್ರೀಶಕ್ತಿ ಯೋಜನೆಯಡಿ ರಚನೆಗೊಂಡ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಗಳು ಆರ್ಥಿಕವಾಗಿ ಸಬಲರಾಗಲು ಪ್ರತಿ ಸ್ತ್ರೀಶಕ್ತಿ ಸ್ವ-ಸಹಾಯ ಸಂಘಕ್ಕೆ ನಿಗಮದ ವತಿಯಿಂದ ರೂ.1.00 ಲಕ್ಷದಿಂದ ರೂ.2.00 ಗಳ ಬಡ್ಡಿರಹಿತ ಸಾಲ ಒದಗಿಸುವುದು. 2023-24ನೇ ಸಾಲಿಗೆ ಈ ಯೋಜನೆಗೆ ಅನುದಾನ ಒದಗಿಸಿರುವುದಿಲ್ಲ.

**3. ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ:-**

ಲಿಂಗತ್ವ ಅಲ್ಪಸಂಖ್ಯಾತರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸಲು ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ನಿಗಮದಿಂದ ನೇರವಾಗಿ ರೂ.30,000/-ಗಳ ಪ್ರೋತ್ಸಾಹಧನವನ್ನು ನೀಡಲಾಗುವುದು.

**4. ಚೇತನ ಯೋಜನೆ:-**

ದಮನಿತ ಮಹಿಳೆಯರು (ಮಹಿಳಾ ಲೈಂಗಿಕ ಕಾರ್ಯಕರ್ತೆಯರು) ಆದಾಯೋತ್ಪನ್ನ ಚಟುವಟಿಕೆ ಕೈಗೊಳ್ಳಲು ಅನುವಾಗುವಂತೆ ನಿಗಮದಿಂದ ನೇರವಾಗಿ ರೂ.30,000/-ಗಳ ಪ್ರೋತ್ಸಾಹಧನವನ್ನು ನೀಡಲಾಗುವುದು.

**5. ಧನಶ್ರೀ :-**

18 ರಿಂದ 60 ವಯೋಮಾನದ ಹೆಚ್.ಐ.ವಿ ಸೋಂಕಿತ ಹಾಗೂ ಬಾಧಿತ ಮಹಿಳೆಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ನಿಗಮದಿಂದ ನೇರವಾಗಿ ರೂ.30,000/-ಗಳ ಪ್ರೋತ್ಸಾಹಧನವನ್ನು ಒದಗಿಸಲಾಗುವುದು.

**6. ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆ:-**

ಆರ್ಥಿಕವಾಗಿ ಮಾಜಿ ದೇವದಾಸಿಯರನ್ನು ಸಬಲೀಕರಣಗೊಳಿಸಲು ಆದಾಯೋತ್ಪನ್ನಕರ ಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ನಿಗಮದಿಂದ 45 ವರ್ಷ ಮೇಲ್ಪಟ್ಟ ಮಾಜಿ ದೇವದಾಸಿ ಮಹಿಳೆಯರಿಗೆ ನೇರವಾಗಿ ಪ್ರೋತ್ಸಾಹಧನ ಮೊತ್ತ ರೂ.30,000/-ಗಳ ಆರ್ಥಿಕ ಸೌಲಭ್ಯವನ್ನು ನೀಡಲಾಗುತ್ತಿದೆ ಹಾಗೂ ದೇವದಾಸಿ ಪದ್ಧತಿಯ ನಿರ್ಮೂಲನೆಗಾಗಿ ಅರಿವು ಮೂಡಿಸುವ ಕಾರ್ಯಕ್ರಮಗಳು, ಕಾನೂನು ಶಿಬಿರ ಹಾಗೂ ಮಾಜಿ ದೇವದಾಸಿ ಮಹಿಳೆಯರಿಗಾಗಿ ಆರೋಗ್ಯ ಶಿಬಿರಗಳನ್ನು ಕೈಗೊಳ್ಳಲಾಗುತ್ತಿದೆ.

**7. ಮಾಜಿ ದೇವದಾಸಿಯರಿಗೆ ವಸತಿ ನಿರ್ಮಾಣ ಯೋಜನೆ:-**

ಕರ್ನಾಟಕ ರಾಜ್ಯದ 15 ಜಿಲ್ಲೆಗಳಲ್ಲಿ ನಿವೇಶನ ಹೊಂದಿರುವ ವಸತಿ ರಹಿತ ಮಾಜಿ ದೇವದಾಸಿ ಮಹಿಳೆಯರಿಗೆ ವಸತಿ ಯೋಜನೆಯನ್ನು ರಾಜೀವ್ ಗಾಂಧಿ ಗ್ರಾಮೀಣಾಭಿವೃದ್ಧಿ ವಸತಿ ನಿಗಮದ ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ. 2018-19ನೇ ಸಾಲಿನಿಂದ ಗ್ರಾಮೀಣ ಪ್ರದೇಶದಲ್ಲಿ ರೂ.1.75 ಲಕ್ಷ ಹಾಗೂ ನಗರ ಪ್ರದೇಶದಲ್ಲಿ ರೂ.2.00 ಲಕ್ಷ ಘಟಕ ವೆಚ್ಚದಲ್ಲಿ ವಸತಿ ಸೌಲಭ್ಯ ಕಲ್ಪಿಸಲಾಗುತ್ತಿದೆ.

**8. ಬಡ್ಡಿ ಸಹಾಯಧನ ಯೋಜನೆ (ಕರ್ನಾಟಕ ರಾಜ್ಯ ಆರ್ಥಿಕ ಹಣಕಾಸು ನಿಗಮ ಮೂಲಕ)**

ಕರ್ನಾಟಕ ರಾಜ್ಯ ಹಣಕಾಸು ನಿಗಮದ ಮೂಲಕ ಕನಿಷ್ಠ ರೂ.5.00 ಲಕ್ಷದಿಂದ ರೂ. 200.00 ಲಕ್ಷಗಳ ಸಾಲವನ್ನು ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಶೇ.10ರಷ್ಟು ಬಡ್ಡಿ ಸಹಾಯಧನವನ್ನು ಸಣ್ಣ/ಮಧ್ಯಮ ಕೈಗಾರಿಕೆ ಹಾಗೂ ಸೇವಾ ಘಟಕಗಳನ್ನು ಪ್ರಾರಂಭಿಸಿ ಉದ್ಯೋಗ ಚಟುವಟಿಕೆಗಳಲ್ಲಿ ತೊಡಗುವ ಮಹಿಳಾ ಉದ್ದಿಮೆದಾರರನ್ನು ಪ್ರೋತ್ಸಾಹಿಸುವ ಸಲುವಾಗಿ ನೀಡಲಾಗುತ್ತಿದೆ.

2021-22ನೇ ಸಾಲಿನ ಆರ್ಥಿಕ ವರ್ಷದಲ್ಲಿ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ 26 ರಲ್ಲಿ ಘೋಷಿಸಿರುವಂತೆ ಮಹಿಳಾ ಉದ್ಯಮಿಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಆಸ್ಪತ್ರೆ, ವೈದ್ಯಕೀಯ ಆರೈಕೆ ಮತ್ತಿತರ ಸೇವಾವಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಉದ್ಯಮಿಗಳಿಗೆ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ರೂ.2.00 ಕೋಟಿಗಳವರೆಗೆ ಶೇಕಡ 4ರ ಬಡ್ಡಿದರದಲ್ಲಿ ಸಾಲ ಸೌಲಭ್ಯ ಒದಗಿಸಲಾಗುತ್ತದೆ.

**9. ಮಹಿಳೆಯರಿಗೆ ಬಡ್ಡಿ ಸಹಾಯಧನ (ಇಂದಿರಾ ಯೋಜನೆ) ಯೋಜನೆ:-**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಯ ದಕ್ಷತೆಯನ್ನು ಹೆಚ್ಚಿಸಲು ಮೇಲ್ವಿಚಾರಕರಿಗೆ ದ್ವಿ-ಚಕ್ರ ವಾಹನ ಖರೀದಿಗಾಗಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ರೂ.50,000/-ಗಳ ಬಡ್ಡಿರಹಿತ ಸಾಲವನ್ನು ನೀಡಲಾಗುವುದು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪ್ರತಿ ಮಾಹೆ ರೂ.1000/-ಗಳನ್ನು ಇಂಧನ ವೆಚ್ಚವಾಗಿ ನೀಡಲಾಗುತ್ತಿದೆ.

**10. ವೃದ್ಧಿ ಯೋಜನೆ:-**

2022-23ನೇ ಸಾಲಿನ ಆಯವ್ಯಯ ಬಾಷಣ ಕಂಡಿಕೆ:142 ರಲ್ಲಿ ಘೋಷಿಸಿರುವಂತೆ "ವ್ಯಾಪಾರ/ಉದ್ಯಮಗಳಲ್ಲಿ ಮಹಿಳೆಯರ ಉಪಸ್ಥಿತಿಯನ್ನು ಹೆಚ್ಚಿಸಲು KITS (ಕರ್ನಾಟಕ ನಾವೀನ್ಯತೆ ಮತ್ತು ತಂತ್ರಜ್ಞಾನ ಸೊಸೈಟಿ) ರವರು "ಎಲಿವೇಟ್" ಯೋಜನೆಯಡಿ ಗುರುತಿಸಲ್ಪಟ್ಟ ಮಹಿಳಾ ಉದ್ದಿಮೆದಾರರಿಗೆ/ಮಹಿಳಾ ನೇತೃತ್ವದ ಸ್ಟಾರ್ಟ್‌ಅಪ್ ಗಳಿಗೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ರೂ.5.00 ರಿಂದ 10.00 ಲಕ್ಷಗಳ ತನಕ ನೇರ ಸಾಲವನ್ನು ಒದಗಿಸಿ "ವೃದ್ಧಿ" ಹೆಸರಿನಡಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.

## ಬಾಲ ಭವನ ಸೊಸೈಟಿ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿಯಲ್ಲಿ ಬರುವ ಬಾಲ ಭವನ ಸೊಸೈಟಿಯು ಮಕ್ಕಳಿಗೆ ಕ್ರಿಯಾತ್ಮಕ ಹಾಗೂ ಸೃಜನಾತ್ಮಕ ಚಟುವಟಿಕೆಗಳನ್ನು ಮಾತ್ರ ನಡೆಸಲಾಗುತ್ತದೆ.

## ಬಾಲ ವಿಕಾಸ ಅಕಾಡೆಮಿ

ಕರ್ನಾಟಕ ಬಾಲ ವಿಕಾಸ ಅಕಾಡೆಮಿಯು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿಯಲ್ಲಿ ಒಂದು ಅಂಗ ಸಂಸ್ಥೆಯಾಗಿ ಧಾರವಾಡ ಕಾರ್ಯನಿರ್ವಹಿಸುತ್ತಿದೆ. 0-18 ವರ್ಷದ ಒಳಗಿನ ಮಕ್ಕಳ ಶ್ರೇಯೋಭಿವೃದ್ಧಿಗಾಗಿ ವೈವಿಧ್ಯಮಯ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ.

*******